ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 220 RNI Number : KNKAN/25/A2770 20-08-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :220 ರಾಯಚೂರು 20-08-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಸಚಿವ ನಾಗೇಂದ್ರ ರಾಜೀನಾಮೆಗೆ ಪ್ರತಿಪಕ್ಷಗಳ ಪಟ್ಟು: ನಾಲ್ಕು ದಿನಗಳ ಕಲಾಪ ವ್ಯರ್ಥ

ಬೆಂಗಳೂರು, ಆ.19- ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಪಟ್ಟು ಹಿಡಿದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ವಿಧಾನಸಭೆಯಲ್ಲಿ ನಡೆಸುತ್ತಿರುವ ಪ್ರತಿಭಟನೆಯಿಂದಾಗಿ ನಾಲ್ಕು ದಿನಗಳ ಕಲಾಪ ಬಹುತೇಕ ಯಾವುದೇ ಫಲಪ್ರದ ಚರ್ಚೆಯಿಲ್ಲದೆ ಕಾಲಹರಣವಾಗಿದೆ.

ಅಧಿವೇಶನದ ಮೊದಲ ದಿನ ಸಂತಾಪ ಸೂಚನೆಗೆ ಕಲಾಪ ಸೀಮಿತವಾಗಿತ್ತು. ಎರಡನೇ ದಿನ ವಿಧಾನಸಭೆಯ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಹಾಗೂ ಬಳಿಕ ನೂತನ ಅಧ್ಯಕ್ಷ ಜಿ.ಎಸ್. ಪಾಟೀಲ್ ಅವರ ಅಭಿನಂದನೆಗೆ ಸದನ ಸೀಮಿತವಾಯಿತು. ವಾರಾಂತ್ಯದ ರಜೆಯ ಬಳಿಕ ಸೋಮವಾರ ಸದನ ಮರುಸಮಾವೇಶಗೊಂಡಾಗ ಬಿಜೆಪಿ ತನ್ನ ಪ್ರತಿಭಟನೆ ದಾಖಲಿಸಿತು.

ಆರಂಭದಲ್ಲಿ ಅರಣ್ಯ ಪ್ರದೇಶದಲ್ಲಿ ನಡೆದ ಎನ್‌ಕೌಂಟರ್ ಪ್ರಕರಣವನ್ನು ಬಿಜೆಪಿ ಹಾಗೂ ಜೆಡಿಎಸ್ ಪ್ರಸ್ತಾಪಿಸಿದವು. ಸರ್ಕಾರ ಪೂರ್ವನಿಗದಿಯಂತೆ ತನ್ನ ಹೇಳಿಕೆ ದಾಖಲಿಸಿದ ಬಳಿಕ, ವಿಪಕ್ಷಗಳು ಸಚಿವ ನಾಗೇಂದ್ರ ಅವರ ವಿಚಾರವನ್ನು ಕೈಗೆತ್ತಿಕೊಂಡು ಪ್ರತಿಭಟನೆ ಮುಂದುವರಿಸಿದವು. ಗದ್ದಲದ ನಡುವೆಯೂ ಸಭಾಧ್ಯಕ್ಷರು ಪ್ರಶ್ನೋತ್ತರ ಕಲಾಪ ನಡೆಸಿದರು. ಗಮನ ಸೆಳೆಯುವ ಸೂಚನೆಯಡಿ ಮಂಡಿಸಲಾದ 20 ಪ್ರಸ್ತಾಪಗಳ ಪೈಕಿ 15ಕ್ಕೆ ಉತ್ತರ ನೀಡಲಾಯಿತು.

ನಿನ್ನೆ ಕೂಡ ಸದನ ಆರಂಭವಾಗುತ್ತಿದ್ದಂತೆ ವಿಧಾನಸಭೆಯ ಉಪಾಧ್ಯಕ್ಷರ ಚುನಾವಣೆ ಪ್ರಕ್ರಿಯೆ ನಡೆಯಿತು. ಮಧ್ಯಾಹ್ನದವರೆಗೆ ಉಪಾಧ್ಯಕ್ಷರಾಗಿ ಆಯ್ಕೆಯಾದ ಮಂಕಾಳ ವೈದ್ಯ ಅವರ ಅಭಿನಂದನೆ ಹಾಗೂ ಗುಣಗಾನಕ್ಕೆ ಕಲಾಪ ಸೀಮಿತವಾಯಿತು. ನಂತರ ಮತ್ತೆ ಬಿಜೆಪಿ-ಜೆಡಿಎಸ್ ಪ್ರತಿಭಟನೆ ಆರಂಭವಾಗಿದ್ದು, ಕಲಾಪದ ಬಹುಪಾಲು ಗದ್ದಲದಲ್ಲೇ ವ್ಯರ್ಥವಾಯಿತು.

ಈ ನಡುವೆ ಕೆಲ ಮಸೂದೆಗಳು ಮಂಡನೆಯಾಗಿವೆ. ಎಂದಿನಂತೆ ಗಮನ ಸೆಳೆಯುವ ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಗಿದೆ.ಸಚಿವ ನಾಗೇಂದ್ರ ಅವರನ್ನು ಕೈಬಿಡುವುದಿಲ್ಲ ಎಂಬ ನಿಲುವಿಗೆ ಆಡಳಿತ ಪಕ್ಷ ಬದ್ಧವಾಗಿರುವಂತೆ ಕಾಣುತ್ತಿದ್ದರೆ, ನಾಗೇಂದ್ರ ಅವರಂತಹ ಕಳಂಕಿತ ಸಚಿವರು ಸದನದಲ್ಲಿದ್ದರೆ ಸುಗಮ ಕಲಾಪ ಸಾಧ್ಯವಿಲ್ಲ ಎಂದು ಬಿಜೆಪಿ ಹಾಗೂ ಜೆಡಿಎಸ್ ಪಟ್ಟು ಹಿಡಿದಿವೆ. ಹೀಗಾಗಿ ಅವರು ಕೊಡುವುದಿಲ್ಲ, ಇವರು ಬಿಡುವುದಿಲ್ಲ ಎಂಬಂತಹ ಪರಿಸ್ಥಿತಿ ನಿರ್ಮಾಣವಾಗಿದ್ದು, ಈ ರಾಜಕೀಯ ಸಂಘರ್ಷಕ್ಕೆ ವಿಧಾನಸಭೆಯ ಕಲಾಪ ಬಲಿಯಾಗುತ್ತಿದೆ.

ರಾಷ್ಟ್ರಮಟ್ಟದಲ್ಲಿ ನಡೆದ ಜೆನ್ ಜಿ ಹೋರಾಟದ ಪರಿಣಾಮ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ರಾಜೀನಾಮೆ ನೀಡಿದ್ದರು. ಜೆನ್ ಜಿ ಹೋರಾಟಕ್ಕೆ ಕಾಂಗ್ರೆಸ್ ಪರೋಕ್ಷ ಬೆಂಬಲ ನೀಡಿತ್ತು. ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯಿಂದ ಉಂಟಾದ ಮುಜುಗರವನ್ನು ನಾಗೇಂದ್ರ ಅವರ ತಲೆದಂಡದ ಮೂಲಕ ಸರಿಪಡಿಸಿಕೊಳ್ಳಲು ಬಿಜೆಪಿ ಯತ್ನಿಸುತ್ತಿದೆ ಎಂಬ ರಾಜಕೀಯ ವಿಶ್ಲೇಷಣೆಗಳು ಕೇಳಿಬರುತ್ತಿವೆ.

428 ಸರ್ಕಾರಿ ಕಾಲೇಜುಗಳಲ್ಲಿ ಪ್ರಾಂಶುಪಾಲರೇ ಇಲ್ಲ: ಸಚಿವ ಬಸವರಾಜ ರಾಯರೆಡ್ಡಿ

ಬೆಂಗಳೂರು: ರಾಜ್ಯದಲ್ಲಿರುವ 440 ಪ್ರಥಮ ದರ್ಜೆ ಕಾಲೇಜುಗಳಿವೆ. ಈ ಪೈಕಿ 428 ಕಾಲೇಜುಗಳಲ್ಲಿ ಪ್ರಾಂಶುಪಾಲರಿಲ್ಲ ಎಂದು ರಾಜ್ಯ ಸರ್ಕಾರವೇ ಒಪ್ಪಿಕೊಂಡಿದೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಮೂಲಸೌಕರ್ಯ ಒಳಗೊಂಡ ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪನೆ ಅನುದಾನ ನೀಡಬೇಕು. ಈ ಮೂಲಕ ಉನ್ನತ ಶಿಕ್ಷಣ ದಾಖಲಾತಿ ಪ್ರಮಾಣ ಹೆಚ್ಚಿಸಬೇಕು ಎಂದು ಆಡಳಿತ ಪಕ್ಷದ ಸದಸ್ಯ ಕೆ.ಅಬ್ದುಲ್ ಜಬ್ಬಾರ್ ಸರ್ಕಾರದ ಗಮನ ಸೆಳೆದರು.

ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ, ಮಾತನಾಡಿ, ರಾಜ್ಯದಲ್ಲಿ ಒಟ್ಟು 468 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ 420 ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆ ಖಾಲಿಯಿವೆ. ಹಂತ - ಹಂತವಾಗಿ ನೇಮಿಸಲಾಗುತ್ತಿದೆ ಎಂದು ತಿಳಿಸಿದರು.

ದಾವಣಗೆರೆ ಜಿಲ್ಲೆಯಲ್ಲಿ ಇಲಾಖಾ ವ್ಯಾಪ್ತಿಯಲ್ಲಿ 11 ಡಿಗ್ರಿ ಹಾಗೂ 8 ಖಾಸಗಿ ಅನುದಾನಿತ ಪಿಯು ಕಾಲೇಜು ಸೇರಿ ಒಟ್ಟಾರೆ 19 ಕಾಲೇಜುಗಳಿವೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿರುವ ವಿದ್ಯಾರ್ಥಿಗಳಿಗೆ ಮೇಲಿನ ಒಟ್ಟು 19 ಇಲಾಖಾ ವ್ಯಾಪ್ತಿಯ ಮೂಲ ಸೌಕರ್ಯಗಳುಳ್ಳ ಪದವಿ ಕಾಲೇಜುಗಳಿವೆ. ಹೊಸದಾಗಿ ಕಾಲೇಜು ಮಂಜೂರು ಮಾಡುವಾಗ ಕಾಲೇಜಿನ ಮೂಲಸೌಕರ್ಯ ಬಗ್ಗೆ ಗಮನ ಹರಿಸಬೇಕಾಗುತ್ತದೆ ಎಂದರು.

2026-2027ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ 8 ಹೊಸ ಕಾಲೇಜುಗಳನ್ನು ಸ್ಥಾಪಿಸಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ದಾವಣಗೆರೆಯಲ್ಲಿ ಹೊಸದಾಗಿ ಕಾಲೇಜು ಮಂಜೂರು ಕುರಿತಂತೆ ಮತ್ತೊಮ್ಮೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಬಿಎಂಟಿಸಿ ಬಿಡಿ ಭಾಗಗಳ ಖರೀದಿ ಅಕ್ರಮ, ತನಿಖಾ ವರದಿ ಬಂದ ಬಳಿಕ ಕ್ರಮ: ಬಿಎಂಟಿಸಿಯಲ್ಲಿ ಬಸ್ ಬಿಡಿ ಭಾಗಗಳ ಖರೀದಿಯಲ್ಲಿ ನಡೆದಿರುವ ನ್ಯೂನತೆಗಳ ಬಗ್ಗೆ ಐವರು ಸದಸ್ಯರ ಉನ್ನತ ಮಟ್ಟದ ಸಮಿತಿ ತನಿಖೆ ನಡೆಸುತ್ತಿದ್ದು, ಮುಂದಿನ ಅಕ್ಟೋಬರ್ ಅಂತ್ಯದ ವೇಳೆಗೆ ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿ ಬುಧವಾರ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್‌ನ ಗೋವಿಂದರಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬಿಎಂಟಿಸಿ ಬಸ್ ಬಿಡಿ ಭಾಗಗಳ ಖರೀದಿಯಲ್ಲಿ ಕೆಲವು ನ್ಯೂನತೆಗಳು ಕಂಡುಬಂದಿರುವ ಬಗ್ಗೆ ಮಾಹಿತಿಗಳು ಕಂಡು ಬಂದ ಹಿನ್ನೆಲೆಯಲ್ಲಿ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ರೈತರ ಬದುಕಿಗೆ ಬೆಳಕಾಗಲಿ ಕೃಷಿ ಸಂಶೋಧನೆ

ರೈತರ ಸಮಸ್ಯೆಗಳಿಗೆ ಪರಿಹಾರ ನೀಡುವ ಸಂಶೋಧನೆಗೆ ಆದ್ಯತೆ: ಡಾ. ಶಶಿಕಾಂತ್ ಉಡಿಕೇರಿ

ರಾಯಚೂರು,ಆ.19-

ಕೃಷಿ ವಿಶ್ವವಿದ್ಯಾಲಯಗಳ ಸಂಶೋಧನಾರ್ಥಿಗಳು ಕೈಗೊಳ್ಳುವ ಪ್ರತಿಯೊಂದು ಸಂಶೋಧನೆಯೂ ರೈತರ ಬದುಕಿಗೆ ಬೆಳಕಾಗಬೇಕು. ಸಂಶೋಧನೆಯ ಫಲಿತಾಂಶಗಳು ರೈತರನ್ನು ತಲುಪಿ ಅವರ ಏಳಿಗೆಗೆ ಸಹಕಾರಿಯಾಗಬೇಕು ಎಂದು ಕಲಬುರಗಿ ವಿಶ್ವವಿದ್ಯಾಲಯದ ಕುಲಪತಿ ಡಾ. ಶಶಿಕಾಂತ್ ಎಸ್. ಉಡಿಕೇರಿ ಹೇಳಿದರು.



ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆಗಸ್ಟ್ 18ರಿಂದ 20ರವರೆಗೆ ನಡೆಯುತ್ತಿರುವ ರಾಷ್ಟ್ರೀಯ ಸ್ನಾತಕೋತ್ತರ ಸಂಶೋಧನಾ ಸಮ್ಮೇಳನವನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

ಸ್ನಾತಕೋತ್ತರ ಹಾಗೂ ಡಾಕ್ಟರೇಟ್ ಪದವಿಯ ಅಂತಿಮ ಹಂತದಲ್ಲಿರುವ ವಿದ್ಯಾರ್ಥಿಗಳಿಗೆ ತಮ್ಮ ಸಂಶೋಧನಾ ಜ್ಞಾನ, ಸಂವಹನ ಹಾಗೂ ಪ್ರಸ್ತುತಿ ಕೌಶಲ್ಯಗಳನ್ನು ಹೆಚ್ಚಿಸಿಕೊಳ್ಳಲು ಸಮ್ಮೇಳನ ಉತ್ತಮ ವೇದಿಕೆಯಾಗಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ಗುಣಮಟ್ಟದ ಸಂಶೋಧನೆ ಕೈಗೊಳ್ಳಬೇಕು ಎಂದರು.

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ಹೈದರಾಬಾದ್‌ನಲ್ಲಿರುವ ರಾಷ್ಟ್ರೀಯ ಸಂಶೋಧನಾ ಸಂಸ್ಥೆಗಳೊಂದಿಗೆ ಹೆಚ್ಚಿನ ಸಹಯೋಗ ಬೆಳೆಸಿಕೊಂಡು ಗುಣಮಟ್ಟದ ಸಂಶೋಧನೆಗೆ ಒತ್ತು ನೀಡಬೇಕು. ರಾಜ್ಯದ ಎಲ್ಲ ಕೃಷಿ ವಿಶ್ವವಿದ್ಯಾಲಯಗಳು ಸೇರಿ ರಾಜ್ಯಮಟ್ಟದ ಸ್ನಾತಕೋತ್ತರ ಸಂಶೋಧನಾ ಸಮ್ಮೇಳನ ಆಯೋಜಿಸುವ ಮೂಲಕ ವಿದ್ಯಾರ್ಥಿಗಳನ್ನು ಸ್ಪರ್ಧಾತ್ಮಕ ಜಗತ್ತಿಗೆ ಸಜ್ಜುಗೊಳಿಸಬೇಕು ಎಂದು ಸಲಹೆ ನೀಡಿದರು.

ಕೃಷಿ ವಿಜ್ಞಾನದಲ್ಲಿ ಹೆಚ್ಚಿನ ಸಂಶೋಧನೆ ಮಾಡಲು ಆಸಕ್ತಿ ಹೊಂದಿರುವವರಿಗೆ ಅನುಕೂಲವಾಗುವಂತೆ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಪೋಸ್ಟ್ ಡಾಕ್ಟರೇಟ್ ಕಾರ್ಯಕ್ರಮ ಆರಂಭಿಸುವ ಕುರಿತು ಚಿಂತನೆ ನಡೆಸಬೇಕು ಎಂದರು.

ಸಂಶೋಧನಾ ಲೇಖನಗಳನ್ನು ಉತ್ತಮ ಗುಣಮಟ್ಟದ ನಿಯತ ಕಾಲಿಕೆಗಳಲ್ಲಿ ಪ್ರಕಟಿಸಲು ವಿದ್ಯಾರ್ಥಿಗಳು ಆದ್ಯತೆ ನೀಡಬೇಕು.

3 ನೇ ಪುಟಕ್ಕೆ

ಲೋಯೋಲ ಸಮಾಜ ಸೇವಾ ಕೇಂದ್ರದಿಂದ ಪರಿಸರ ಸಂರಕ್ಷಣೆಯ ಜಾಗೃತಿ

ಪರಿಸರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ: ಈಶಪ್ಪ



ಮಾನ್ವಿ,ಆ.18-

ಪರಿಸರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು, ಪರಿಸರವನ್ನು ಉಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಈಶಪ್ಪ ಹೇಳಿದರು.

ತಾಲೂಕಿನ ಚಿಕಲರ್ಪವಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಲೋಯೋಲ ಸಮಾಜ ಸೇವಾ ಕೇಂದ್ರದ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಪರಿಸರ ಜಾಗೃತಿ ಹಾಗೂ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪರಿಸರ ಸಂರಕ್ಷಣೆಯಲ್ಲಿ ಯುವಕರು ಹಾಗೂ ವಿದ್ಯಾರ್ಥಿಗಳು ಪ್ರಮುಖ ಪಾತ್ರ ವಹಿಸಬೇಕು. ಉತ್ತಮ ಪರಿಸರದಿಂದ ಮನುಷ್ಯನ ಆರೋಗ್ಯವೂ ಉತ್ತಮವಾಗಿರುತ್ತದೆ ಎಂದು ತಿಳಿಸಿದರು.

ಪ್ಲಾಸ್ಟಿಕ್ ಬಳಕೆಯನ್ನು ನಿಯಂತ್ರಿಸಿ, ಸಾಧ್ಯವಾದಷ್ಟು

3 ನೇ ಪುಟಕ್ಕೆ

ರಾಷ್ಟ್ರಮಟ್ಟದ ಕರಾಟೆ ಸ್ಪರ್ಧೆಯಲ್ಲಿ ರಾಯಚೂರು ವಿದ್ಯಾರ್ಥಿಗೆ ದ್ವಿತೀಯ ಸ್ಥಾನ

ರಾಯಚೂರು,ಆ.19-

ಉಡುಪಿಯಲ್ಲಿ ಇತ್ತೀಚೆಗೆ ನಡೆದ ರಾಷ್ಟ್ರಮಟ್ಟದ ಕರಾಟೆ ಸ್ಪರ್ಧೆಯಲ್ಲಿ ರಾಯಚೂರಿನ ಗಜಾನನ ಗಾಡ್ ಕೆವಿ ಶಾಲೆಯ ವಿದ್ಯಾರ್ಥಿ ದ್ವಿತೀಯ ಸ್ಥಾನ ಪಡೆದು ಜಿಲ್ಲೆಗೆ ಹೆಮ್ಮೆ ತಂದಿದ್ದಾರೆ.



ನಿರಂತರ ತರಬೇತಿ, ಕಠಿಣ ಪರಿಶ್ರಮ ಹಾಗೂ ಆತ್ಮವಿಶ್ವಾಸದಿಂದ ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ವಿದ್ಯಾರ್ಥಿ ಈ ಸಾಧನೆ ಮಾಡಿದ್ದಾರೆ. ಅವರ ಯಶಸ್ಸಿನ ಹಿಂದೆ ರಾಯಚೂರಿನ ಹಿರಿಯ ಕರಾಟೆ ತರಬೇತುದಾರ ಚಂದ್ರಕಾಂತ್ ಪಾತ್ರೆ ಅವರ ಮಾರ್ಗದರ್ಶನ ಹಾಗೂ ತರಬೇತಿ ಪ್ರಮುಖ ಪಾತ್ರ ವಹಿಸಿದೆ. ತರಬೇತುದಾರರ ಪುತ್ರ ಅನಿರುದ್ಧ್ ಅವರ ಸಹಕಾರವೂ ವಿದ್ಯಾರ್ಥಿಯ ಸಾಧನೆಗೆ ಪ್ರೇರಣೆಯಾಗಿದೆ.

ರಾಷ್ಟ್ರಮಟ್ಟದಲ್ಲಿ ದ್ವಿತೀಯ ಸ್ಥಾನ ಗಳಿಸಿರುವ ವಿದ್ಯಾರ್ಥಿಯ ಸಾಧನೆಗೆ ಶಾಲೆಯ ಶಿಕ್ಷಕರು, ಪೋಷಕರು, ಕರಾಟೆ ತರಬೇತುದಾರರು ಹಾಗೂ ಕ್ರೀಡಾಭಿಮಾನಿಗಳು ಅಭಿನಂದನೆ ಸಲ್ಲಿಸಿದ್ದಾರೆ. ವಿದ್ಯಾರ್ಥಿಯ ಕ್ರೀಡಾ ಭವಿಷ್ಯ ಮತ್ತಷ್ಟು ಉಜ್ವಲವಾಗಲಿ ಎಂದು ಶುಭ ಹಾರೈಸಿದ್ದಾರೆ.

187ನೇ ವಿಶ್ವ ಛಾಯಾಗ್ರಹಕರ ದಿನಾಚರಣೆ



ಮಾನ್ವಿ,ಆ.19-

ಮಾನ್ವಿ ತಾಲೂಕಿನ ಛಾಯಾಗ್ರಾಹಕರ ಸಂಘದ ವತಿಯಿಂದ 187ನೇ ವಿಶ್ವ ಛಾಯಾಗ್ರಹಕರ ದಿನಾಚರಣೆಯನ್ನು ಪಟ್ಟಣದ ಹಳೆ ಎಲ್‌ಐಸಿ ಕಾಂಪ್ಲೆಕ್ಸ್ ನಲ್ಲಿ ಸರಳವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಛಾಯಾಗ್ರಾಹಕ ಸಂಘದ ಅಧ್ಯಕ್ಷರು ಶ್ರೀನಾಥ್ ಚೌಧರಿ ಅವರು, ಛಾಯಾಗ್ರಹಣವು ಕೇವಲ ವೃತ್ತಿಯಲ್ಲ, ಸಮಾಜದ ಆಗುಹೋಗುಗಳನ್ನು ದಾಖಲಿಸುವ ಮಹತ್ವದ ಮಾಧ್ಯಮವಾಗಿದೆ. ಐತಿಹಾಸಿಕ ಘಟನೆಗಳು, ಸಾಮಾಜಿಕ ಬದಲಾವಣೆ ಗಳು ಹಾಗೂ ಜನಜೀವನದ ಪ್ರಮುಖ ಕ್ಷಣಗಳನ್ನು ಛಾಯಾಚಿತ್ರಗಳ ಮೂಲಕ ದಾಖಲಿಸುವಲ್ಲಿ ಛಾಯಾಗ್ರಾಹಕರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗೌರಾಧ್ಯಕ್ಷರು ಪ್ರಸಾದ್ ಮಿಶ್ರಾ, ಜಗನ್ನಾಥ್ ಚೌದ್ರಿ, ಅಧ್ಯಕ್ಷರು ಶ್ರೀನಾಥ್ ಚೌಧರಿ, ಕಾರ್ಯದರ್ಶಿ ಪ್ರಭು ಕುಂಬಾರ್ ರವಿಕುಮಾರ್ ಗೌಡ, ಸಿ.ನಾಗರಾಜ್ ಅಬ್ದುಲ್ ಗಯಾಸ್, ರಾಮ್ ಪ್ರಸಾದ್ ಮಿಶ್ರ, ಸಿರಾಜ್ ಪಾಷಾ, ಶಫೀ ಚಾವೂಸ್, ಮಂಜುನಾಥ್, ಶಿವಕುಮಾರ್ ಸಜ್ಜನ್, ಶರಣು ಕಳಸ, ಕಾಳಿಂಗ ರಾಜ್, ವಿಜಯ್ ಕುಮಾರ್ ಮಾನ್ವಿ

3 ನೇ ಪುಟಕ್ಕೆ



ಪ.ಪಂಚಾಯತಿ ಮುಖ್ಯಾಧಿಕಾರಿಯಾಗಿ ಜಗನ್ನಾಥ ಅಧಿಕಾರ ಸ್ವೀಕಾರ

ಸಿರವಾರ,ಆ.18-

ಸ್ಥಳೀಯ ಪ.ಪಂಚಾಯತಿ ಮುಖ್ಯಾಧಿಕಾರಿ ಹುದ್ದೆ ಕಳೆದ ಮೂರು ತಿಂಗಳಿಂದ ಖಾಲಿ (ಪ್ರಭಾರಿಯಲ್ಲಿದ್ದ) ಹುದ್ದೆಗೆ ಕೊನೆಗೂ ಜಗನ್ನಾಥರನ್ನು ಮುಖ್ಯಾಧಿಕಾರಿಯನ್ನು ನೇಮಕ ಮಾಡಿದ್ದೂ ಬುಧುವಾರ ಪಂಚಾಯತಿಗೆ ಆಗಮಿಸಿ ಅದಿಕಾರ ಸ್ವಿಕಾರ ಮಾಡಿಕೊಂಡರು. ಸಮುದಾಯ ಸಂಘಟನೆ ಅದಿಕಾರಿ ಹಂಪಯ್ಯಪಾಟೀಲ್, ಜೆಇ ಹುಸೇನ ಸಾಬ್, ಕಂದಾಯನಿರೀಕ್ಷಕ ಪ್ರದೀಪ ಕುಮಾರ, ಸಿಬ್ಬಂದಿಗಳಾದ ಲಕ್ಷ್ಮೀ, ಪದ್ಮಾ, ಉಮೇಶ, ಚಾಂದಾಬ್ ಸೇರಿದಂತೆ ಇನ್ನಿತರರು ಸನ್ಮಾನಿಸಿದರು.

ಬಿಸಿಯೂಟ ಸೇವಿಸಿ ವಿದ್ಯಾರ್ಥಿಗಳಿಗೆ ವಾಂತಿ, ತಲೆಸುತ್ತು

ಅರಕೇರಾ,ಆ.19-

ತಾಲೂಕಿನ ಮಲ್ಲಾಪೂರ ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಮಧ್ಯಾಹ್ನದ ಬಿಸಿಯೂಟ ಸೇವಿಸಿದ ಬಳಿಕ ಹಲವು ವಿದ್ಯಾರ್ಥಿಗಳು ಅಸ್ವಸ್ಥಗೊಂಡ ಘಟನೆ ನಡೆದಿದೆ.



ಶಾಲೆಯಲ್ಲಿ ಚಿತ್ರಾನ್ನ ಸೇವಿಸಿದ ನಂತರ ಒಬ್ಬರ ಬಳಿಕ ಒಬ್ಬ ವಿದ್ಯಾರ್ಥಿಗಳಿಗೆ ವಾಂತಿ ಹಾಗೂ ತಲೆಸುತ್ತು ಕಾಣಿಸಿಕೊಂಡಿದೆ. ಶಾಲೆಯ ಇಬ್ಬರು ಅತಿಥಿ ಶಿಕ್ಷಕರಿಗೂ ಅಸ್ವಸ್ಥತೆ ಉಂಟಾಗಿದೆ. ತಕ್ಷಣ ಅಸ್ವಸ್ಥ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಅರಕೇರಾ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಬಿಸಿಯೂಟ ಹಾಗೂ ಶುದ್ಧ ಕುಡಿಯುವ ನೀರಿನ ಗುಣಮಟ್ಟವನ್ನು ಸಮರ್ಪಕವಾಗಿ ಕಾಯ್ದುಕೊಳ್ಳದಿರುವುದರಿಂದಲೇ ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದಾರೆ ಎಂದು ಪಾಲಕರು ಆರೋಪಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಅಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸಿ, ಬಿಸಿಯೂಟ ಹಾಗೂ ಕುಡಿಯುವ ನೀರಿನ ಮಾದರಿಗಳನ್ನು ಪ್ರಯೋಗಾಲಯ ಪರೀಕ್ಷೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಘಟನೆಯ ಮಾಹಿತಿ ಪಡೆದ ಮುಖಂಡರಾದ ಎ. ರಾಜಶೇಖರ ನಾಯಕ ಹಾಗೂ ಕೆ. ಅನಂತರಾಜ ನಾಯಕ, ಹಿರಿಯ ವೈದ್ಯ ಡಾ. ಎಚ್.ಎ. ನಾಡಗೌಡ ಅವರೊಂದಿಗೆ ಆಸ್ಪತ್ರೆಗೆ ಭೇಟಿ ನೀಡಿ ವಿದ್ಯಾರ್ಥಿಗಳ ಆರೋಗ್ಯದ ಕುರಿತು ಮಾಹಿತಿ ಪಡೆದರು. ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಹಾಗೂ ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಸಲಹೆ ನೀಡಿದರು.

ಬಿಇಒ ರಾಧಾದೇವಿ, ಟಿಎಚ್‌ಒ ಡಾ. ಬನದೇಶ, ಅಕ್ಷರ ದಾಸೋಹ ಅಧಿಕಾರಿ ಬಸವರಾಜ ಕಟ್ಟಿಮನಿ, ಕ್ಷೇತ್ರ ಸಮನ್ವಯಾಧಿಕಾರಿ ಶಿವರಾಜ ಪೂಜಾರಿ, ಬಿಆರ್‌ಪಿ ಶಿವಕುಮಾರ ನಾಡಗೌಡ ಹಾಗೂ ಸಿಆರ್‌ಪಿ ಬಸವರಾಜ ಸಾತಲ್ ಸೇರಿದಂತೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಹನೂರು ಗುಂಡೇಟು ಪ್ರಕರಣ: ನ್ಯಾಯಾಂಗ ತನಿಖೆಗೆ ರೈತ ಸಂಘ ಆಗ್ರಹ

ದೇವದುರ್ಗ,ಆ.18-

ಹನೂರು ತಾಲ್ಲೂಕಿನ ಮರಿಯಮಂಗಲ ಅರಣ್ಯ ಪ್ರದೇಶದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ನಡೆಸಿದ ಗುಂಡಿನ ದಾಳಿಯಲ್ಲಿ ಮೂವರು ಮೃತಪಟ್ಟಿರುವ ಪ್ರಕರಣದ ಸತ್ಯಾಸತ್ಯತೆ ಬಹಿರಂಗಪಡಿಸಲು ಸ್ವತಂತ್ರ ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಕರ್ನಾಟಕ ರೈತ ಸಂಘ (ಎಐಕೆಕೆಎಸ್) ದೇವದುರ್ಗ ತಾಲೂಕು ಸಮಿತಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.



ಈ ಕುರಿತು ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿರುವ ಸಂಘದ ಮುಖಂಡರು, ಘಟನೆ ಅತ್ಯಂತ ಗಂಭೀರವಾಗಿದ್ದು, ಅರಣ್ಯ ಇಲಾಖೆಯ ಹೇಳಿಕೆಗಳಲ್ಲಿಯೇ ವ್ಯತ್ಯಾಸಗಳಿವೆ ಎಂಬ ಆರೋಪಗಳು ಕೇಳಿಬರುತ್ತಿವೆ. ಮೃತರ ಕುಟುಂಬಸ್ಥರು ಮರಣೋತ್ತರ ಪರೀಕ್ಷೆಗೆ ವಿರೋಧ ವ್ಯಕ್ತಪಡಿಸಿರುವುದು ಪ್ರಕರಣದ ಕುರಿತು ಮತ್ತಷ್ಟು ಅನುಮಾನಗಳಿಗೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ.

ಜನರ ಜೀವ ಮತ್ತು ಹಕ್ಕುಗಳನ್ನು ರಕ್ಷಿಸಬೇಕಾದ ಸರ್ಕಾರಿ ವ್ಯವಸ್ಥೆಯೇ ಗುಂಡಿನ ದಾಳಿ ನಡೆಸಿ ಜೀವಗಳನ್ನು ಬಲಿ ಪಡೆದಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮರ್ಥನೀಯವಲ್ಲ. ಇದು ಕೇವಲ ಮೂವರ ಸಾವಿನ ಪ್ರಶ್ನೆಯಲ್ಲ; ಬಡವರು, ಅರಣ್ಯವಾಸಿಗಳು ಹಾಗೂ ದುಡಿಯುವ ಜನರ ಜೀವದ ಹಕ್ಕಿನ ಪ್ರಶ್ನೆಯಾಗಿದೆ ಎಂದು ಸಂಘ ತಿಳಿಸಿದೆ.

ಪ್ರಕರಣದ ಕುರಿತು ಯಾವುದೇ ಇಲಾಖೆಯ ಪ್ರಭಾವಕ್ಕೆ ಒಳಗಾಗದ ಸ್ವತಂತ್ರ ನ್ಯಾಯಾಂಗ ತನಿಖೆ ನಡೆಸಬೇಕು. ಗುಂಡಿನ ದಾಳಿ ನಡೆಸಿದ ಸಿಬ್ಬಂದಿ ಹಾಗೂ ಘಟನೆಗೆ ಕಾರಣರಾದ ಅಧಿಕಾರಿಗಳ ಪಾತ್ರದ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಗುಂಡೇಟಿಗೆ ಬಲಿಯಾದ ಪ್ರತಿಯೊಬ್ಬರ ಕುಟುಂಬಕ್ಕೂ ಸಮರ್ಪಕ ಪರಿಹಾರ ನೀಡಬೇಕು, ಕುಟುಂಬದ ಒಬ್ಬ ಅರ್ಹ ಸದಸ್ಯರಿಗೆ ಸರ್ಕಾರಿ ಉದ್ಯೋಗ ಕಲ್ಪಿಸಬೇಕು ಹಾಗೂ ಕುಟುಂಬಗಳ ಜೀವನೋಪಾಯಕ್ಕೆ ಅಗತ್ಯವಾದ ಸಾಮಾಜಿಕ ಮತ್ತು ಆರ್ಥಿಕ ಸೌಲಭ್ಯಗಳನ್ನು ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಇದಲ್ಲದೆ, ಪ್ರಕರಣಕ್ಕೆ ಸಂಬಂಧಿಸಿದ ಸಾಕ್ಷ್ಯಗಳು, ಶಸ್ತ್ರಾಸ್ತ್ರ ಬಳಕೆಯ ವಿವರಗಳು, ಸ್ಥಳ ದಾಖಲೆಗಳು ಸೇರಿದಂತೆ ಎಲ್ಲ ಪ್ರಮುಖ ದಾಖಲೆಗಳನ್ನು ಸಂರಕ್ಷಿಸಿ

3 ನೇ ಪುಟಕ್ಕೆ

ಮೊದಲ ಬೆಳೆಗೆ ನೀರು ಹರಿಸಲು ಆಗ್ರಹ: ಟಿಬಿ ಬೋರ್ಡ್ ಕಚೇರಿಗೆ ಪೊಲೀಸ್ ಬಂದೋಬಸ್ತ್

ವಿಜಯನಗರ,ಆ.19–


ತುಂಗಭದ್ರಾ ಜಲಾಶಯದಿಂದ ಮೊದಲ ಬೆಳೆಯ ಕೃಷಿ ಚಟುವಟಿಕೆಗಳಿಗೆ ನೀರು ಹರಿಸುವಂತೆ ಒತ್ತಾಯಿಸಿ ಬಳ್ಳಾರಿ, ವಿಜಯನಗರ ಹಾಗೂ ರಾಯಚೂರು ಜಿಲ್ಲೆಗಳ ನೂರಾರು ರೈತರು ಮಂಗಳವಾರ ಹೊಸಪೇಟೆ ಹೊರವಲಯದಲ್ಲಿರುವ ತುಂಗಭದ್ರಾ ಜಲಾಶಯ ಮಂಡಳಿ (ಟಿಬಿ ಬೋರ್ಡ್) ಕಚೇರಿ ಎದುರು ಪ್ರತಿಭಟನೆ ನಡೆಸಲು ಮುಂದಾಗಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಭಾರೀ ಬಂದೋಬಸ್ತ್ ವ್ಯವಸ್ಥೆ ಮಾಡಿದೆ.

ನೀರಿನ ಕೊರತೆಯಿಂದ ಕೃಷಿ ಬೆಳೆಗಳು ಒಣಗುವ ಸ್ಥಿತಿ ನಿರ್ಮಾಣವಾಗಿದ್ದು, ಮೊದಲ ಬೆಳೆಗೆ ಸಮರ್ಪಕವಾಗಿ ನೀರು ಬಿಡುಗಡೆ ಮಾಡಬೇಕು ಎಂಬುದು ರೈತರ ಪ್ರಮುಖ ಬೇಡಿಕೆಯಾಗಿದೆ. ರಾಯಚೂರು, ಸಿಂಧನೂರು, ಸಿರುಗುಪ್ಪ, ಮಾನ್ವಿ, ಕಾರಟಗಿ ಸೇರಿದಂತೆ ವಿವಿಧ ಭಾಗಗಳಿಂದ ರೈತರು ಪ್ರತಿಭಟನೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ಟಿಬಿ ಡ್ಯಾಂ ವ್ಯಾಪ್ತಿಯಲ್ಲಿ ಸುಮಾರು 8.5 ಟಿಎಂಸಿ ನೀರು ಬಿಡುಗಡೆ ಮಾಡಬೇಕು ಎಂದು ರೈತರು ಒತ್ತಾಯಿಸಿದ್ದಾರೆ. ಕಾಲುವೆಗಳ ಮೂಲಕ ನೀರು ಹರಿಸಲಾಗುತ್ತಿದ್ದರೂ ಅದರ ಪ್ರಯೋಜನ ನಮ್ಮ ಭಾಗದ ರೈತರಿಗೆ ಸಮರ್ಪಕವಾಗಿ ದೊರೆಯುತ್ತಿಲ್ಲ. ನೀರು ಆಂಧ್ರಪ್ರದೇಶದತ್ತ ಹರಿದುಹೋಗುತ್ತಿದೆ ಎಂಬುದು ರೈತರ ಆರೋಪವಾಗಿದೆ. ಹೀಗಾಗಿ ನಮ್ಮ ಭಾಗದ ಕೃಷಿ ಪ್ರದೇಶಗಳಿಗೆ ಆದ್ಯತೆ ನೀಡಿ ನೀರು ಹರಿಸಬೇಕು ಎಂದು ಆಗ್ರಹಿಸಿದ್ದಾರೆ.

ಟಿಬಿ ಬೋರ್ಡ್ ಕಚೇರಿಗೆ ಖಾಕಿ ಸರ್ಪಗಾವಲು :

ರೈತರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಟಿಬಿ ಡ್ಯಾಂ ಕಚೇರಿ ಸುತ್ತಮುತ್ತ ಪೊಲೀಸರು ಬಿಗಿ ಬಂದೋಬಸ್ತ್ ಕೈಗೊಂಡಿದ್ದಾರೆ.



ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ ಅವರ ನೇತೃತ್ವದಲ್ಲಿ ಭದ್ರತಾ ವ್ಯವಸ್ಥೆ ಮಾಡಲಾಗಿದ್ದು, ಅವರು ಸ್ಥಳದಲ್ಲೇ ಮೊಕ್ಕಾಂ ಹೂಡಿ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ.

ಬಂದೋಬಸ್ತ್‌ಗಾಗಿ ಇಬ್ಬರು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳು, 17 ಇನ್ಸ್ ಪೆಕ್ಟರ್‌ಗಳು, 25 ಪಿಎಸ್‌ಐಗಳು, 50 ಎಎಸ್‌ಐಗಳು, 8 ಡಿಆರ್ ಸಿಬ್ಬಂದಿ, ಎರಡು ಕೆಎಸ್‌ಆರ್‌ಪಿ ತುಕಡಿಗಳು ಸೇರಿದಂತೆ ಒಟ್ಟು ಸುಮಾರು 350 ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಮಹಿಳಾ ಪೊಲೀಸ್ ಸಿಬ್ಬಂದಿಯನ್ನೂ ಭದ್ರತಾ ಕರ್ತವ್ಯಕ್ಕೆ ನಿಯೋಜಿಸಲಾಗಿದೆ.

ನೀರಿಗಾಗಿ ರೈತರ ಹೋರಾಟ :

ಕೃಷಿ ಚಟುವಟಿಕೆಗಳಿಗೆ ನೀರಿನ ತೀವ್ರ ಅಭಾವ ಎದುರಾಗಿರುವ ಹಿನ್ನೆಲೆಯಲ್ಲಿ ಟಿಬಿ ಡ್ಯಾಂನಿಂದ ನೀರು ಬಿಡುಗಡೆ ಮಾಡುವಂತೆ ರೈತರು ಒತ್ತಾಯಿಸುತ್ತಿದ್ದಾರೆ. ಬೆಳೆಗಳು ಒಣಗುತ್ತಿರುವ ಪರಿಸ್ಥಿತಿಯಲ್ಲಿ ತಕ್ಷಣವೇ ನೀರು ಹರಿಸದಿದ್ದರೆ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದು ರೈತ ಮುಖಂಡರು ಎಚ್ಚರಿಸಿದ್ದಾರೆ.

ಒಟ್ಟಿನಲ್ಲಿ, ರೈತರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಟಿಬಿ ಬೋರ್ಡ್ ಕಚೇರಿ ಸುತ್ತಮುತ್ತ ಪೊಲೀಸ್ ಸರ್ಪಗಾವಲು ನಿರ್ಮಾಣವಾಗಿದ್ದು, ರೈತರ ಬೇಡಿಕೆ ಹಾಗೂ ಅಧಿಕಾರಿಗಳ ಮುಂದಿನ ಕ್ರಮ ಕುತೂಹಲಕ್ಕೆ ಕಾರಣವಾಗಿದೆ.

ಬನ್ನಿಕೊಪ್ಪದಲ್ಲಿ ಬ್ಯಾಟರಿ ಚಾಲಿತ ಯಂತ್ರದ ಮೂಲಕ ತೊಗರಿ ಕುಡಿ ಚಿವುಟುವಿಕೆ ಪ್ರಾತ್ಯಕ್ಷಿಕೆ

ಕೊಪ್ಪಳ ಆ.19–

ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಕೊಪ್ಪಳ ವತಿಯಿಂದ ಬನ್ನಿಕೊಪ್ಪ ಗ್ರಾಮದಲ್ಲಿ ಬ್ಯಾಟರಿ ಚಾಲಿತ ಯಂತ್ರದ ಮೂಲಕ ತೊಗರಿ ಬೆಳೆಯಲ್ಲಿ ಕುಡಿ ಚಿವುಟುವಿಕೆಯ ಪ್ರಾತ್ಯಕ್ಷಿಕೆಯನ್ನು ಯಶಸ್ವಿಯಾಗಿ ನಡೆಸಲಾಯಿತು.

ಬನ್ನಿಕೊಪ್ಪ ಗ್ರಾಮದ ಮಾಜಿ ಸೈನಿಕ ಹಾಗೂ ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ನಾಗರಾಜ ವೆಂಕರಡ್ಡಿ ವೆಂಕಟಾಪುರ ಅವರ ತೊಗರಿ ಹೊಲದಲ್ಲಿ ಮಂಗಳವಾರ (ಆ. 18ರಂದು) ಪ್ರಾತ್ಯಕ್ಷಿಕೆ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ಮುಖ್ಯಸ್ಥರಾದ ಡಾ. ಬದರಿ ಪ್ರಸಾದ್ ಅವರು ತೊಗರಿ ಬೆಳೆಯಲ್ಲಿ ಕುಡಿಚಿವುಟುವಿಕೆಯ ಅಗತ್ಯತೆ ಹಾಗೂ ಲಘು ಪೋಷಕಾಂಶಗಳನ್ನು ಸರಿಯಾದ ಪ್ರಮಾಣದಲ್ಲಿ ಬಳಸುವು ದರಿಂದ ಬೆಳೆಯ ಇಳುವರಿ ಹೆಚ್ಚಿಸುವ ಕುರಿತು ರೈತರಿಗೆ ಮಾಹಿತಿ ನೀಡಿದರು.

ತೊಗರಿಯಲ್ಲಿ ಹೂ ಹಿಡಿಯಲು ಹಾಗೂ ಹೂ ಉದುರುವುದನ್ನು



ತಡೆಯಲು ನಾಪ್ತಾಲೀನ್ ಅಸಿಟಿಕ್ ಆಸಿಡ್ (ಎನ್‌ಎಎ) ಹಾರ್ಮೋನ್‌ನ್ನು ಪ್ರತಿ ಲೀಟರ್ ನೀರಿಗೆ 0.25 ಮಿ.ಲೀ. ಪ್ರಮಾಣದಲ್ಲಿ ಬೆರೆಸಿ ಸಿಂಪಡಿಸಬಹುದು ಎಂದು ಅವರು ತಿಳಿಸಿದರು. ಅಲ್ಲದೆ, ಇಳುವರಿ ಹೆಚ್ಚಳಕ್ಕಾಗಿ ಹೂ ಬಿಡುವ ಹಂತದಲ್ಲಿ ಪಲ್ಸ್ ಮ್ಯಾಜಿಕ್‌ನ್ನು ಎಕರೆಗೆ 2 ಗ್ರಾಂ ಪ್ರಮಾಣದಲ್ಲಿ ಸಿಂಪಡಿಸುವತೆ ಸಲಹೆ ನೀಡಿದರು. ಪಲ್ಸ್ ಮ್ಯಾಜಿಕ್ ಸಿಂಪಡಿಸುವ ಸಂದರ್ಭದಲ್ಲಿ ಒಂದು ಹೋಳು ನಿಂಬೆ ಹಣ್ಣಿನ ರಸವನ್ನು ದ್ರಾವಣಕ್ಕೆ ಬೆರೆಸಿ ಸಿಂಪಡಿಸುವತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಕೃಷಿ ನಿರ್ದೇಶಕರಾದ ಪ್ರಮೋದ ತುಂಬಳ, ಕೃಷಿ ಇಲಾಖೆಯ ಸಿಬ್ಬಂದಿ ಹಾಗೂ ವಾಮನಮೂರ್ತಿ ಉಪಸ್ಥಿತರಿದ್ದರು.

ಪ್ರಗತಿಪರ ರೈತರಾದ ಸಿದ್ದಪ್ಪ ಮಾಳೆಕೊಪ್ಪ, ಕಾಳಪ್ಪ ಡಂಬಳ್, ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ವೀರಪ್ಪ ಗೊಂದಿ, ಸಲಬಪ್ಪ ಗೊಂದಿ, ನಾಗರಾಜ ಹಳ್ಳಿಕೇರಿ, ಈಶಪ್ಪ ಬ್ಯಾಳಿ, ಪರಶುರಾಮ ವಜ್ರಬಂಡಿ, ಮರಿತಿಮ್ಮಪ್ಪ ದೇವರರ್ ಸೇರಿದಂತೆ ಸ್ಥಳೀಯ ರೈತರು ಭಾಗವಹಿಸಿದ್ದರು.

ರೈತರು, ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಜ್ಞಾನಿಗಳನ್ನು (ಡಾ. ಬದರಿ ಪ್ರಸಾದ್ ಪಿ.ಆರ್., ವಿಸ್ತರಣಾ ಮುಂದಾಳು ಮೊ. 9900 145705) ಸಂಪರ್ಕಿಸಬಹುದು.

ಪೂರ್ವಭಾವಿ ಸಭೆಯಲ್ಲಿ ನಿರ್ಧಾರ: ಮಹನೀಯರ ಜಯಂತಿಗಳ ಅರ್ಥಪೂರ್ಣ ಆಚರಣೆ – ತಹಶೀಲ್ದಾರ ಶೇಷಾವಲಿ

ಬಳ್ಳಾರಿ,ಆ.19–

ಜಿಲ್ಲಾ ಕೇಂದ್ರದಲ್ಲಿ ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಹಾಯಕ ಆಯುಕ್ತರ ಕಚೇರಿಯ ತಹಶೀಲ್ದಾರ ಶೇಷಾವಲಿ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ವಿವಿಧ ಮಹನೀಯರ ಜಯಂತಿಗಳನ್ನು ಆಚರಿಸುವ ಕುರಿತು ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರಿ ನಿಯಮಾವಳಿಗಳ ಅನ್ವಯ ಮಹನೀಯರ ಜಯಂತಿಗಳನ್ನು ಕೇವಲ ಸಾಂಪ್ರದಾಯಿಕ ಕಾರ್ಯಕ್ರಮವನ್ನಾಗಿ ಸೀಮಿತಗೊಳಿಸದೆ, ಅವರ ಆದರ್ಶ, ತತ್ವ ಹಾಗೂ ಸಮಾಜಮುಖಿ ಸಂದೇಶಗಳನ್ನು ಯುವ ಪೀಳಿಗೆಗೆ ಮುಟ್ಟಿಸುವ ನಿಟ್ಟಿನಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದರು.

ಆ.28 ರಂದು ಸಮಾಜ ಸುಧಾರಕ ಬ್ರಹ್ಮಶ್ರೀ ನಾರಾಯಣಗುರು ಜಯಂತಿ, ಆ.30 ರಂದು ಕಾಯಕ ಶರಣ ನುಲಿಯ ಚಂದಯ್ಯ ಜಯಂತಿ ಹಾಗೂ ಸೆ.04 ರಂದು ಶ್ರೀಕೃಷ್ಣ ಜಯಂತಿ ಕಾರ್ಯಕ್ರಮಗಳನ್ನು ವಿಜೃಂಭಣೆಯಿದ,



ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ನಿರ್ಧರಿಸಲಾಯಿತು.

ಜಯಂತಿ ಕಾರ್ಯಕ್ರಮ ದಿನಗಳಂದು ಬೆಳಿಗ್ಗೆ 09 ಗಂಟೆಗೆ ನಗರದ ಮುನಿಸಿಪಲ್ ಕಾಲೇಜು ಮೈದಾನದಿಂದ ಗಡಿಗಿ ಚೆನ್ನಪ್ಪ ವೃತ್ತ- ಹಳೆಯ ಜಿಲ್ಲಾಧಿಕಾರಿ ಕಚೇರಿ ಮುಂಭಾಗ- ಹೆಚ್.ಆರ್.ಗವಿಯಪ್ಪ ವೃತ್ತದ ಮಾರ್ಗವಾಗಿ ಡಾ.ಜೋಳದ ರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಕಾರ್ಯಕ್ರಮದವರೆಗೆ ಸಾಂಸ್ಕೃತಿಕ ಕಲಾ ತಂಡಗಳು ಒಳಗೊಂಡ ಮೆರವಣಿಗೆ ನಡೆಯಲಿದೆ. ಬಳಿಕ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಕಾರ್ಯಕ್ರಮ ನಡೆಯುವ ವೇದಿಕೆ ನಿರ್ವಹಣೆ, ಆಹ್ವಾನ ಪತ್ರಿಕೆ ಮುದ್ರಣ ಹಾಗೂ ವಿತರಣೆ, ಗಣ್ಯರ ಉಪಸ್ಥಿತಿ, ಉಪನ್ಯಾಸಕರ ಆಯ್ಕೆ, ಭಕ್ತಿ ಸಂಗೀತ ಮತ್ತು ಮೂಲಸೌಕರ್ಯಗಳ ಕುರಿತು ಸಂಬಧಪಟ್ಟ ಅಧಿಕಾರಿಗಳಿಗೆ ಸೂಕ್ತ ಜವಾಬ್ದಾರಿ ಹಂಚಿಕೆ ಮಾಡಲಾಯಿತು.

ಬ್ಯಾನರ್, ಪಟಾಕಿ, ಡಿಜೆ ಧ್ವನಿವರ್ಧಕಗಳನ್ನು ಸಂಪೂರ್ಣವಾಗಿದೆ ನಿಷೇಧಿಸಲಾಗಿದೆ. ಮಹನೀಯರ ಎಲ್ಲಾ ಜಯಂತಿ ಕಾರ್ಯಕ್ರಮಗಳಲ್ಲಿ ವಿವಿಧ ಸಂಘ-ಸಸ್ಥೆಗಳ ಪದಾಧಿಕಾರಿಗಳು, ಮುಖಂಡರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ. ನಾಗರಾಜ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮಗಳ ರೂಪುರೇಷೆ ವಿವರಿಸಿದರು. ಈ ವೇಳೆ ಪೊಲೀಸ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಮಹಾನಗರ ಪಾಲಿಕೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದು, ಸಲಹೆ-ಸೂಚ ನೆಗಳನ್ನು ಹಂಚಿಕೊಡರು.

ಪಿಂಜಾರ್ ಓಣಿ, ಕೊಂಡನಾಯಕನಹಳ್ಳಿ ಭಾಗ-2 ಸ್ಲಂ ಘೋಷಣೆಗೆ ಆಗ್ರಹ: ನಗರಸಭೆಗೆ ಮನವಿ

ಹೊಸಪೇಟೆ/ವಿಜಯನಗರ:

ನಗರದ ಚಿತ್ತವಾಡಗಿ ವ್ಯಾಪ್ತಿಯ ಪಿಂಜಾರ್ ಓಣಿ ಹಾಗೂ ಕೊಂಡನಾಯಕನಹಳ್ಳಿ ಭಾಗ-2 ಪ್ರದೇಶಗಳನ್ನು ಸ್ಲಂ ಎಂದು ಘೋಷಿಸುವಂತೆ ಹಾಗೂ ನಗರ ಕೇಂದ್ರ ಗ್ರಂಥಾಲಯಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಅವರ ಹೆಸರನ್ನು ನಾಮಕರಣ ಮಾಡುವಂತೆ ಒತ್ತಾಯಿಸಿ ಸ್ಲಂ ಜನರ ಸಂಘಟನೆ ಕರ್ನಾಟಕ ವಿಜಯನಗರ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ನಗರಸಭೆ ಅಧ್ಯಕ್ಷರು ಹಾಗೂ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಚಿತ್ತವಾಡಗಿಯ ಸರ್ವೆ ನಂಬರ್ 223, 249/1 ಹಾಗೂ ಕೊಂಡನಾಯಕನಹಳ್ಳಿಯ ಸರ್ವೆ ನಂಬರ್ 30ರ ಹಿಸ್ಸಾ -1 ಮತ್ತು 2ರಲ್ಲಿ ಕಳೆದ 40ರಿಂದ 50 ವರ್ಷಗಳಿಂದ ನೂರಾರು ಕುಟುಂಬಗಳು ವಾಸವಾಗಿವೆ. ಈ ಪ್ರದೇಶಗಳು ಸ್ಲಂ ಘೋಷಣೆಗೆ ಅರ್ಹವಾಗಿದ್ದರೂ ಇದುವರೆಗೆ ಅಧಿಕೃತವಾಗಿ ಸ್ಲಂ ಎಂದು ಘೋಷಣೆಯಾಗಿಲ್ಲ ಎಂದು ಸಂಘಟನೆಯ ಪದಾಧಿಕಾರಿಗಳು ಮನವಿಯಲ್ಲಿ ತಿಳಿಸಿದ್ದಾರೆ.

ಸ್ಲಂ ಎಂದು ಘೋಷಣೆಯಾಗದ ಹಿನ್ನೆಲೆಯಲ್ಲಿ ನಿವಾಸಿಗಳಿಗೆ ಹಕ್ಕುಪತ್ರ ಪಡೆಯಲು ಸಾಧ್ಯವಾಗದೆ ಭೂಮಿ ಹಕ್ಕಿನಿಂದ ವಂಚಿತರಾಗಿದ್ದಾರೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಪೂರ್ವಸಿದ್ಧತಾ ಕ್ರಮಗಳನ್ನು



ಕೈಗೊಂಡು ಆದಷ್ಟು ಬೇಗ ಈ ಪ್ರದೇಶಗಳನ್ನು ಸ್ಲಂ ಎಂದು ಘೋಷಿಸಬೇಕು ಎಂದು ಒತ್ತಾಯಿಸಿದರು. ಇದೇ ಸಂದರ್ಭದಲ್ಲಿ ನಗರದ ನಗರ ಕೇಂದ್ರ ಗ್ರಂಥಾಲಯಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಗ್ರಂಥಾಲಯ ಎಂದು ಮರುನಾಮಕರಣ ಮಾಡುವಂತೆಯೂ ನಗರಸಭೆಗೆ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿ ಮಾತನಾಡಿದ ನಗರಸಭೆ ಅಧ್ಯಕ್ಷ ರೂಪೇಶ್ ಕುಮಾರ್ ಹಾಗೂ ಶಿವಕುಮಾರ್ ಆಗಸ್ಟ್ 25ರಂದು ನಗರಸಭೆಯ ಸಾಮಾನ್ಯ ಸಭೆ ನಡೆಯಲಿದ್ದು, ಎರಡೂ ವಿಷಯಗಳನ್ನು ಸಭೆಯಲ್ಲಿ ಚರ್ಚೆಗೆ ತಂದು ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಶ್ಯಾಮ್ ಚೌದರಿ, ಅಧ್ಯಕ್ಷ ಹೆಚ್. ಶೇಷು, ಉಪಾಧ್ಯಕ್ಷರಾದ ತನ್ವೀರ್ ಅಹ್ಮದ್, ರಾಜಭಕ್ತಿ ಬರಕಾತಿ, ವಿ. ಪರಸಪ್ಪ, ಪ್ರಧಾನ ಕಾರ್ಯದರ್ಶಿ ಎನ್. ವೆಂಕಟೇಶ್, ಸಂಘಟನಾ ಕಾರ್ಯದರ್ಶಿ ಗುತ್ತಿ ಕೈಲಾಸ್, ಮಹಿಳಾ ಘಟಕದ ಅಧ್ಯಕ್ಷೆ ಹುಲಿಗೆಮ್ಮ, ಉಪಾಧ್ಯಕ್ಷೆ ನೂರ್ ಜಹಾನ್, ಲತಾ ನಾಗವೇಣಿ, ದುರ್ಗಮ್ಮ, ಮಾಬುನಿ, ಮುಖಂಡರಾದ ಶೇಕ್ ಮೆಹಬೂಬ್ ಬಾಷಾ, ಪಾಂಡು ನಾಯಕ್, ಮಹಾಭಾಷಾ, ಹೊನ್ನಪ್ಪ, ಪೀರ್ ಸಾಬ್, ಕಾರ್ತಿಕ್, ಕಾಗಿ ಉಮೇಶ್, ಗವಿಸಿದ್ದ ಸೇರಿದಂತೆ ಯುವ ಘಟಕದ ಭರತ್ ಕುಮಾರ್ ಉಮೇಶ್, ಚಿರಂಜೀವಿ, ಶ್ರೀನಿವಾಸ್, ದ್ವಾರಕೇಶ್, ಜೆ.ಬಿ. ರಘು, ಮುಕ್ಕಣ್ಣ, ಕರಿಯಪ್ಪ, ಮಾರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶ್ರೀ ಮೇಧಾ ಕಾಲೇಜಿನಲ್ಲಿ ಅಂತರಾಷ್ಟ್ರಿಯ ಯುವ ದಿನಾಚರಣೆ

ಯುವಶಕ್ತಿ ರಾಷ್ಟ್ರಶಕ್ತಿಯಾಗಲಿ: ಡಾ. ಇಂದ್ರಾಣಿ ಕರೆ



ಬಳ್ಳಾರಿ,ಆ.19–

ಯುವಕರು ದೇಶದ ಅಮೂಲ್ಯ ಸಂಪತ್ತು ಹಾಗೂ ನಾಳೆಯ ನಾಯಕರಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಸ್ಪಷ್ಟ ಗುರಿಯೊಂದಿಗೆ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ಇಂದ್ರಾಣಿ ಅವರು ಹೇಳಿದರು.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಹೆಚ್‌ಐವಿ/ಏಡ್ಸ್ ನಿಯಂತ್ರಣ ಘಟಕ ಹಾಗೂ ಶ್ರೀ ಮೇಧಾ ಪದವಿ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಕಾಲೇಜು ಆವರಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಅಂತರಾಷ್ಟ್ರಿಯ ಯುವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನವು ಭವಿಷ್ಯ ನಿರ್ಮಾಣದ ಪ್ರಮುಖ ಹಂತ. ಯಾವುದೇ ಕಾರಣಕ್ಕೂ ಗುರಿಯಿಂದ ವಿಮುಖರಾಗದೆ ಶಿಸ್ತುಬದ್ಧ ಜೀವನ ನಡೆಸಬೇಕು. ಅಸುರಕ್ಷಿತ ಲೈಂಗಿಕ ಸಂಪರ್ಕದಿದ ಹರಡುವ ಹೆಚ್‌ಐವಿ, ಸಿಫಿಲಿಸ್‌ನಂತಹ ಸೋಂಕುಗಳ ಬಗ್ಗೆ ಎಚ್ಚರ ವಹಿಸಬೇಕು ಎಂದು ಕಿವಿಮಾತು ಹೇಳಿದರು.

ಯುವಜನರು ಮಾದಕ ದ್ರವ್ಯ ಸೇರಿದಂತೆ ಎಲ್ಲಾ ದುಶ್ಚಟಗಳಿಂದ ದೂರವಿರಬೇಕು ಹಾಗೂ ಸಾಮಾಜಿಕ ಜಾಲತಾಣಗಳನ್ನು ಜವಾಬ್ದಾರಿಯುತವಾಗಿ ಬಳಸಿ, ಯಾವುದೇ ವಿಷಯ ಹಂಚಿಕೊಳ್ಳುವ ಮುನ್ನ ಸತ್ಯಾಸತ್ಯತೆ ಪರಿಶೀಲಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಸಿ.ಕೆ. ರಾಮಕೃಷ್ಣ ಅವರು ಮಾತನಾಡಿ, ಹೆಚ್‌ಐವಿ/ಏಡ್ಸ್ ನಿಯಂತ್ರಣದಲ್ಲಿ ಸಮಾಜದ ಪಾತ್ರ ಮುಖ್ಯವಾಗಿದ್ದು, ವಿದ್ಯಾರ್ಥಿಗಳು ಈ ಬಗ್ಗೆ ವೈಜ್ಞಾನಿಕ ಮಾಹಿತಿ ಹೊಂದಿರಬೇಕು. ಆರೋಗ್ಯ ಇಲಾಖೆಯ ಜಾಗೃತಿ ಕಾರ್ಯಕ್ರಮಗಳಿಗೆ ಸಂಸ್ಥೆ ಸದಾ ಬೆಂಬಲ ನೀಡಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮೊಬಿಲೈಸೇಷನ್ ಫಾರ್ ಏಡ್ಸ್ ಸೇಫ್ಟಿ ಅಭಿಯಾನದ ಬಗ್ಗೆ ಮಾಹಿತಿ ನೀಡಿ, ಕ್ಯೂಆರ್ ಕೋಡ್ ಮೂಲಕ ಹೆಚ್ಚಿನ ಅರಿವು ಪಡೆದು ಸಮಾಜದಲ್ಲಿ ಜಾಗೃತಿ ಮೂಡಿಸಲು ಪ್ರೇರೇಪಿಸಲಾಯಿತು.

ರೀಲ್ಸ್ ಮೇಕಿಂಗ್ ಸ್ಪರ್ಧೆಯ ವಿಜೇತರು:★

ಕಾರ್ಯಕ್ರಮದ ಅಂಗವಾಗಿ ನಡೆದ ಹೆಚ್‌ಐವಿ/ಏಡ್ಸ್ ಜಾಗೃತಿ ರೀಲ್ಸ್ ಮೇಕಿಂಗ್ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಪ್ರಥಮ ಬಹುಮಾನ (ರೂ.3,000): ಪ್ರಯಾ ಮತ್ತು ತಂಡ (ಶ್ರೀ ಮೇಧಾ ಪದವಿ ಮಹಾವಿದ್ಯಾಲಯ). ದ್ವಿತೀಯ ಬಹುಮಾನ (ರೂ.2,000): ಯಶವಂತ್ ಕುಮಾರ್ ಮತ್ತು ತಂಡ (ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು, ಬಳ್ಳಾರಿ) ತೃತೀಯ ಬಹುಮಾನ (ರೂ.1,000): ಕಿಷ್ಕಿಂದಾ ವಿದ್ಯಾಲಯದ ವಿದ್ಯಾರ್ಥಿಗಳ ತಂಡ.ಕಾರ್ಯಕ್ರಮದಲ್ಲಿ ಜಿಲ್ಲಾ ಹೆಚ್‌ಐವಿ/ಏಡ್ಸ್ ನಿಯಂತ್ರಣ ಘಟಕದ ಅಧಿಕಾರಿಗಳು, ಸಿಬ್ಬಂದಿ, ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶ್ರೀ ಕೃಷ್ಣ ಜಯಂತಿ:ಅದ್ದೂರಿ ಆಚರಣೆಗೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ: ಎಡಿಸಿ ಸಿದ್ರಾಮೇಶ್ವರ



ಕೊಪ್ಪಳ ಆ.19–

ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಸೆಪ್ಟೆಂಬರ್ 4 ರಂದು ಆಚರಿಸಲಾಗುವ ಶ್ರೀ ಕೃಷ್ಣ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ಅಧಿಕಾರಿಗಳು ಅಚ್ಚುಕಟ್ಟು ವ್ಯವಸ್ಥೆ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಜಿಲ್ಲಾಡಳಿತದಿಂದ ಸೆಪ್ಟೆಂಬರ್ 4 ರಂದು ಜಿಲ್ಲಾ ಕೇಂದ್ರದಲ್ಲಿ ಆಚರಿಸಲಾಗುವ ಶ್ರೀ ಕೃಷ್ಣ ಜಯಂತಿ ಅಂಗವಾಗಿ ಚರ್ಚಿಸಲು ಮಂಗಳವಾರದದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರದ ಆದೇಶದಂತೆ ಸೆಪ್ಟೆಂಬರ್ 4 ರಂದು ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಹಾಗೂ ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳು ಹಾಗೂ ಅಧೀನ ಕಚೇರಿಗಳಲ್ಲಿ ಶ್ರೀ ಕೃಷ್ಣ ಜಯಂತಿಯನ್ನು ಕಡ್ಡಾಯವಾಗಿ ಆಚರಿಸಬೇಕು. ಅಂದು ಬೆಳಿಗ್ಗೆ 9.30 ಗಂಟೆಗೆ ನಗರದ ಶ್ರೀ ಶಿರಸಪ್ಪಯ್ಯನ ಮಠದಿಂದ ಗಡಿಯಾರ ಕಂಬ, ಜವಾಹರ ರಸ್ತೆ ಮಾರ್ಗವಾಗಿ ಶ್ರೀ ಕೃಷ್ಣ ದೇವಸ್ಥಾನದವರೆಗೆ ಶ್ರೀ ಕೃಷ್ಣರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ಅದ್ದೂರಿಯಾಗಿ ನಡೆಯಲಿದ್ದು, ಎಲ್ಲ ಇಲಾಖೆಗಳ ಅಧಿಕಾರಿಗಳು ಸಿಬ್ಬಂದಿ ಮೆರವಣಿಗೆಯಲ್ಲಿ ಕಡ್ಡಾಯವಾಗಿ ಹಾಜರಿರಬೇಕು. ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳು, ವಸತಿ ಶಾಲೆಗಳು ಹಾಗೂ ಗ್ರಾಮ ಪಂಚಾಯತಿಗಳಲ್ಲಿಯೂ ಶ್ರೀ ಕೃಷ್ಣ ಜಯಂತಿಯನ್ನು ಕಡ್ಡಾಯವಾಗಿ ಆಚರಿಸಬೇಕು ಎಂದು ಅವರು ಸೂಚನೆ ನೀಡಿದರು.

ಮೆರವಣಿಗೆಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಹಾಗೂ ಸಂಚಾರ ಪೊಲೀಸ್ ವ್ಯವಸ್ಥೆಯನ್ನು ಜಿಲ್ಲಾ ಪೊಲೀಸ್ ಇಲಾಖೆ ಕಲ್ಪಿಸಬೇಕು. ನಗರಸಭೆ ವತಿಯಿಂದ ಶ್ರೀ ಕೃಷ್ಣ ಅವರ ಭಾವಚಿತ್ರವನ್ನು ಹೂವಿನಿಂದ ಅಲಂಕರಿಸುವುದು, ಸಾರೋಟನ್ನು ಶೃಂಗರಿಸುವುದು ಹಾಗೂ ಭಾವಚಿತ್ರ ಮತ್ತು ಸಾರೋಟಿಗೆ ಹೂವಿನ ಹಾರದ ವ್ಯವಸ್ಥೆ ಮಾಡಬೇಕು. ಮೆರವಣಿಗೆಯಲ್ಲಿ ಭಾಗವಹಿಸುವ ಕಲಾವಿದರು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಮತ್ತು ಮೆರವಣಿಗೆ ಸಾಗುವ ರಸ್ತೆಯನ್ನು ಸ್ವಚ್ಛಗೊಳಿಸಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಸಮಾಜದ ಮುಖಂಡರು ಹಾಗೂ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಶ್ರೀ ಕೃಷ್ಣರ ಜಯಂತಿಯನ್ನು ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ಆಚರಿಸಬೇಕು. ಇದಕ್ಕೆ ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ, ಸಮಾಜದ ಮುಖಂಡರಾದ ಕುರುಗೋಡ ರವಿ ಯಾದವ, ಜಗನ್ನಾಥ ಯಾದವ, ಯಮನೂರಪ್ಪ, ಚಂದ್ರಶೇಖರ ಅಡವಿಬಾವಿ, ಹುಲುಗಪ್ಪ ವಾಲಿಕಾರ, ಶಿವಪ್ಪ ಮಿರ್ಜಿ ಸೇರಿದಂತೆ ಸಮಾಜದ ಇತರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಹಾಜರಿದ್ದರು.

ಶ್ರೀ ನುಲಿಯ ಚಂದಯ್ಯ ಜಯಂತಿ:ಅರ್ಥಪೂರ್ಣ ಆಚರಣೆಗೆ ಕ್ರಮ ವಹಿಸಿ: ಎಡಿಸಿ ಸಿದ್ರಾಮೇಶ್ವರ

ಕೊಪ್ಪಳ ಆ.19–

ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಆಗಸ್ಟ್ 28 ರಂದು ಜಿಲ್ಲಾಡಳಿತದಿಂದ ಆಚರಿಸಲಾಗುವ ಶ್ರೀ ನುಲಿಯ ಚಂದಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಸಂಬಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅಧಿಕಾರಿಗಳಿಗೆ ಸೂಚಿಸಿದರು. ಆಗಸ್ಟ್ 28 ರಂದು ಆಚರಿಸಲಾಗುವ ಶ್ರೀ ನುಲಿಯ ಚಂದಯ್ಯ ಅವರ ಜಯಂತಿ ಆಚರಣೆ ಅಂಗವಾಗಿ ಮಂಗಳವಾರದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಆದೇಶದಂತೆ ಆಗಸ್ಟ್ 28 ರಂದು ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಹಾಗೂ ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳು ಹಾಗೂ ಅಧೀನ ಕಚೇರಿಗಳಲ್ಲಿ ಶ್ರೀ ನುಲಿಯ ಚಂದಯ್ಯ ಜಯಂತಿಯನ್ನು ಕಡ್ಡಾಯವಾಗಿ ಆಚರಿಸಬೇಕು. ಅಂದು ಬೆಳಿಗ್ಗೆ 9.30 ಗಂಟೆಗೆ ನಗರದ ಗವಿಮಠದಿಂದ ಸಾಹಿತ್ಯ ಭವನದವರೆಗೆ ಶ್ರೀ ನುಲಿಯ ಚಂದಯ್ಯ ಅವರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ಅದ್ದೂರಿಯಾಗಿ ನಡೆಯಲಿದ್ದು, ಎಲ್ಲ ಇಲಾಖೆಗಳ ಅಧಿಕಾರಿಗಳು ಸಿಬ್ಬಂದಿ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಹಾಜರಿರಬೇಕು. ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳು, ವಸತಿ ಶಾಲೆಗಳು ಹಾಗೂ ಗ್ರಾಮ ಪಂಚಾಯತಿಗಳಲ್ಲಿಯೂ ಶ್ರೀ ನುಲಿಯ ಚಂದಯ್ಯ ಜಯಂತಿಯನ್ನು ಕಡ್ಡಾಯವಾಗಿ ಆಚರಿಸಬೇಕು ಎಂದು ಅವರು ಸೂಚನೆ ನೀಡಿದರು.

ಮೆರವಣಿಗೆ ಹಾಗೂ ಸಾಹಿತ್ಯ ಭವನದ ವೇದಿಕೆ ಕಾರ್ಯಕ್ರಮಕ್ಕೆ ಸೂಕ್ತ ಪೊಲೀಸ್ ಬಂದೋಬಸ್ತ್ ಹಾಗೂ ಸಂಚಾರ ಪೊಲೀಸ್ ವ್ಯವಸ್ಥೆಯನ್ನು ಜಿಲ್ಲಾ ಪೊಲೀಸ್ ಇಲಾಖೆ ಕಲ್ಪಿಸಬೇಕು. ನಗರಸಭೆ ವತಿಯಿಂದ ಶ್ರೀ ನುಲಿಯ ಚಂದಯ್ಯ ಅವರ ಭಾವಚಿತ್ರವನ್ನು ಹೂವಿನಿಂದ ಅಲಂಕರಿಸುವುದು, ಸಾರೋಟನ್ನು ಶೃಂಗರಿಸುವುದು ಹಾಗೂ ಭಾವಚಿತ್ರ ಮತ್ತು ಸಾರೋಟಿಗೆ ಹೂವಿನ ಹಾರದ ವ್ಯವಸ್ಥೆ ಮಾಡಬೇಕು. ಮೆರವಣಿಗೆಯಲ್ಲಿ ಭಾಗವಹಿಸುವ ಕಲಾವಿದರು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಮತ್ತು ಮೆರವಣಿಗೆ ಸಾಗುವ ರಸ್ತೆಯನ್ನು ಸ್ವಚ್ಛಗೊಳಿಸಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಸಮಾಜದ ಮುಖಂಡರು ಹಾಗೂ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಶ್ರೀ ನುಲಿಯ ಚಂದಯ್ಯ ಜಯಂತಿಯನ್ನು ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ಆಚರಿಸಬೇಕು. ಇದಕ್ಕೆ ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ, ಸಮಾಜದ ಮುಖಂಡರಾದ ಶಂಬಣ್ಣ ಭಜಂತ್ರಿ, ಬಸವಣ್ಣ ಓಜನಹಳ್ಳಿ, ಲೋಕೇಶ್ ಭಜಂತ್ರಿ, ಲಕ್ಷ್ಮಣ ಭಜಂತ್ರಿ, ನಾಗಪ್ಪ ಭಜಂತ್ರಿ, ತಿಪ್ಪಣ್ಣ ಭಾಗ್ಯನಗರ ಸೇರಿದಂತೆ ಸಮಾಜದ ಇತರರು ಹಾಗು ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು

ಒಂದನೇಯ ಪುಟದಿಂದ

ಹನೂರು ಗುಂಡೇಟು ಪ್ರಕರಣ: ನ್ಯಾಯಾಂಗ ತನಿಖೆಗೆ ರೈತ ಸಂಘ ಆಗ್ರಹ

ತನಿಖೆಯನ್ನು ಪಾರದರ್ಶಕವಾಗಿ ನಡೆಸಬೇಕು. ಮೃತರ ಕುಟುಂಬಗಳ ಮೇಲೆ ಯಾವುದೇ ರೀತಿಯ ಒತ್ತಡ ಹೇರದೆ ಅವರ ಹಕ್ಕು ಮತ್ತು ಘನತೆಯನ್ನು ರಕ್ಷಿಸಬೇಕು ಎಂದು ಸಂಘ ಆಗ್ರಹಿಸಿದೆ.

''ಜನರ ಜೀವಕ್ಕಿಂತ ಯಾವುದೇ ಸರ್ಕಾರಿ ಇಲಾಖೆಯ ಅಧಿಕಾರ ದೊಡ್ಡದಲ್ಲ. ಅರಣ್ಯ ಸಂರಕ್ಷಣೆಯ ಹೆಸರಿನಲ್ಲಿ ಬಡಜನರ ಜೀವಗಳನ್ನು ಬಲಿಕೊಡುವುದನ್ನು ಯಾವುದೇ ಕಾರಣಕ್ಕೂ ಒಪ್ಪಲಾಗದು. ಮೃತರಿಗೆ ನ್ಯಾಯ ಸಿಗುವವರೆಗೆ, ಸತ್ಯ ಹೊರಬರುವವರೆಗೆ ಮತ್ತು ತಪ್ಪಿತಸ್ಥರಿಗೆ ಶಿಕ್ಷೆಯಾಗುವವರೆಗೆ ಹೋರಾಟ ಮುಂದುವರಿಸಲಾಗುವುದು'' ಎಂದು ಕರ್ನಾಟಕ ರೈತ ಸಂಘದ ತಾಲೂಕು ಅಧ್ಯಕ್ಷ ಕೆ. ಗಿರಿಲಿಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ದುರ್ಗಣ್ಣ ಇರಬಗೇರಾ ಹಾಗೂ ಮುಖಂಡರು ತಿಳಿಸಿದ್ದಾರೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಜೈಗೌಡ, ಶಫಿ ಪಾಷಾ, ರಮೇಶ ದೇವದುರ್ಗ, ಶಿವಪ್ಪ ಪೂಜಾರಿ ಕರಿಗುಡ್ಡ, ಶಿವಕುಮಾರ್ ಮುಂಡರಗಿ, ಶೇಖಪ್ಪ ಕರಿಗುಡ್ಡ, ಸಿ.ಕೆ. ಹನುಮಂತಪ್ಪ ಕಾಗರಗಲ್ ಸೇರಿದಂತೆ ಸಂಘದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ರೈತರ ಬದುಕಿಗೆ ಬೆಳಕಾಗಲಿ ಕೃಷಿ ಸಂಶೋಧನೆ

ಕೃತಕ ಬುದ್ಧಿಮತ್ತೆ ಸೇರಿದಂತೆ ಕಂಪ್ಯೂಟರ್ ತಂತ್ರಾಂಶಗಳ ಮೇಲೆ ಸಂಪೂರ್ಣ ಅವಲಂಬಿತರಾಗಿ ಸಂಶೋಧನಾ ಲೇಖನ ಬರೆಯುವುದು ಸೂಕ್ತವಲ್ಲ; ಸ್ವಂತ ಜ್ಞಾನ, ವಿಶ್ಲೇಷಣೆ ಮತ್ತು ಸಂಶೋಧನಾ ಸಾಮರ್ಥ್ಯಕ್ಕೆ ಆದ್ಯತೆ ನೀಡಬೇಕು ಎಂದು ಕಿವಿಮಾತು ಹೇಳಿದರು.

ಕೃಷಿ ಕೇವಲ ಕಸುಬಲ್ಲ, ಉದ್ಯಮವಾಗಲಿ:ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಶಿಕ್ಷಣ ನಿರ್ದೇಶಕ ಡಾ. ಗುರುರಾಜ ಸುಂಕದ ಮಾತನಾಡಿ, ರೈತರ ನೈಜ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಸಂಶೋಧನೆಗಳನ್ನು ರೂಪಿಸಬೇಕು ಎಂದರು. ಕೃಷಿಯನ್ನು ಕೇವಲ ಕಸುಬಾಗಿ ಕಾಣದೆ ಉದ್ಯಮವನ್ನಾಗಿ ಪರಿಗಣಿಸಿದಾಗ ರೈತರ ಬದುಕಿನಲ್ಲಿ ಆರ್ಥಿಕ ಸ್ಥಿರತೆ ಸಾಧ್ಯ. ಸಂಶೋಧನೆಗಳು ಕೇವಲ ವೈಯಕ್ತಿಕ ಶೈಕ್ಷಣಿಕ ಪ್ರಗತಿಗೆ ಸೀಮಿತವಾಗದೆ ರೈತರು ಮತ್ತು ಸಮಾಜಕ್ಕೆ ಉಪಯೋಗವಾಗಬೇಕು ಎಂದರು. ಕೃಷಿ ತಂತ್ರಜ್ಞಾನಗಳು ರೈತರನ್ನು ತಲುಪುವ ಪ್ರಮಾಣ ಹೆಚ್ಚಬೇಕಿದೆ. ಸಂಶೋಧನಾ ಫಲಿತಾಂಶಗಳು ಪ್ರಯೋಗಾಲಯಗಳಲ್ಲೇ ಉಳಿಯದೆ ಹೊಲಗಳಿಗೆ ತಲುಪುವಂತೆ ಮಾಡುವುದು ಸಂಶೋಧಕರ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಕೃಷಿ ತಾಂತ್ರಿಕತೆ ವಿಭಾಗದ ಡೀನ್ ಡಾ. ಕೆ.ವಿ. ಪ್ರಕಾಶ, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ವಿಭಾಗದ ಡೀನ್ ಡಾ. ಜಾಗೃತಿ ದೇಶಮಾನ್ಯ, ವ್ಯವಸ್ಥಾಪನಾ ಮಂಡಳಿ ಸದಸ್ಯೆ ಶ್ರೀಮತಿ ರೇಣುಕಾ ಪಿರಂಗಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಹಾಗೂ ಡೀನ್ (ಸ್ನಾತಕೋತ್ತರ) ಡಾ. ಎ.ಜಿ. ಶ್ರೀನಿವಾಸ ಸ್ವಾಗತಿಸಿದರು. ಡಾ. ಶರಣಗೌಡ ಹಿರೇಗೌಡರ್ ವಂದಿಸಿದರು. ಸಮ್ಮೇಳನದಲ್ಲಿ ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರು ಹಾಗೂ ಪ್ರಾಧ್ಯಾಪಕರು ಸೇರಿದಂತೆ 900ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದಾರೆ.

ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ : ಈಶಪ್ಪ

ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣಕ್ಕೆ ಮುಂದಾಗಬೇಕು. ಪ್ಲಾಸ್ಟಿಕ್ ತ್ಯಾಜ್ಯದಿಂದ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವ ಸಾಧ್ಯತೆ ಇದ್ದು, ಪ್ರತಿಯೊಬ್ಬರೂ ಪರಿಸರ ಸ್ನೇಹಿ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಮೂಲಕ ಪರಿಸರ ದಿನಾಚರಣೆಯ ಮಹತ್ವವನ್ನು ತಿಳಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು.

ಈ ಸಂದರ್ಭದಲ್ಲಿ ಸ್ವಸಹಾಯ ಸಂಘದ ಅಧ್ಯಕ್ಷೆ ಜಾನಮ್ಮ, ಲೋಯೋಲ ಸಮಾಜ ಸೇವಾ ಕೇಂದ್ರದ ಅನ್ನಮ್ಮ, ದುರ್ಗಮ್ಮ, ದೀಪಿಕಾ, ರವೀಂದ್ರ ಜಾನೇಕಲ್ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

187ನೇ ವಿಶ್ವ ಛಾಯಾಗ್ರಹಕರ ದಿನಾಚರಣೆ

ಉಮಾಇನ್, ಮುಸ್ತಫ, ಜೆ. ಶಂಕರ್ ಜಂಬಣ್ಣ, ರವಿ ಕುಮಾರ್ ಮಲ್ಲೇಶ್, ಬಸವರಾಜ್, ಅಜಯ್ ಕುಮಾರ್ ಮಾನ್ವಿ ತಾಲೂಕಿನ ಛಾಯಾಗ್ರಾಹಕ ಸಂಘದ ಸರ್ವ ಸದಸ್ಯರು ಭಾಗವಹಿಸಿದ್ದರು.

ಪಟ್ಟು: ನಾಲ್ಕು ದಿನಗಳ ಕಲಾಪ ವ್ಯರ್ಥ

ಇದರ ನಡುವೆ ರಾಜ್ಯದಲ್ಲಿ ಬರ ಪರಿಸ್ಥಿತಿ, ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿನ ಲೋಪದೋಷಗಳು, ಬಿಡದಿ ಟೌನ್‌ಶಿಪ್ ಯೋಜನೆ, ಕಾವೇರಿ ನೀರು ಹಂಚಿಕೆ ಕುರಿತು ನೀರು ನಿರ್ವಹಣಾ ಸಮಿತಿ ಮತ್ತು ಪ್ರಾಧಿಕಾರಗಳು ನೀಡುತ್ತಿರುವ ತೀರ್ಪುಗಳು ಸೇರಿದಂತೆ ಹಲವು ಗಂಭೀರ ವಿಚಾರಗಳು ಚರ್ಚೆಯಾಗಬೇಕಿವೆ. ಕಾವೇರಿ ವಿವಾದದ ತೀರ್ಪುಗಳು ಮಂಡ್ಯ, ಮೈಸೂರು ಹಾಗೂ ಬೆಂಗಳೂರು ಭಾಗದ ಜನರಲ್ಲಿ ಆತಂಕ ಮೂಡಿಸಿವೆ. ಜೊತೆಗೆ ಸರ್ಕಾರಿ ಭೂಮಿ ಬಳಕೆ ಕುರಿತಂತೆ ವಿಧಾನಸಭೆಯಲ್ಲಿ ಮಂಡನೆಯಾಗಲಿರುವ ಮಸೂದೆ ಅತ್ಯಂತ ಮಹತ್ವದ್ದಾಗಿದೆ. ಈ ಬಗ್ಗೆಯೂ ಚರ್ಚೆಯಾಗಬೇಕಿದೆ.

ಇಂತಹ ಮಹತ್ವದ ವಿಷಯಗಳು ಚರ್ಚೆಯಾಗಬೇಕಾದ ಸಂದರ್ಭದಲ್ಲಿ ಒಂದೇ ವಿಚಾರಕ್ಕೆ ಸದನದಲ್ಲಿ ನಿರಂತರವಾಗಿ ಸಂಘರ್ಷ ನಡೆಯುತ್ತಿರುವುದು ಹಾಗೂ ಕಲಾಪದ ಅಮೂಲ್ಯ ಸಮಯ ವ್ಯರ್ಥವಾಗುತ್ತಿರುವುದು ಟೀಕೆಗೆ ಗುರಿಯಾಗಿದೆ. ಇತ್ತ ಸಚಿವ ನಾಗೇಂದ್ರ ಅವರ ವಿರುದ್ಧ ಬಿಜೆಪಿ ರಾಜ್ಯಾದ್ಯಂತ ಹೋರಾಟ ಆರಂಭಿಸಿದೆ.

ಖರ್ಗೆಗೆ ಅವಮಾನ: ಶುದ್ಧೀಕರಣ ಕೃತ್ಯಕ್ಕೆ ಆಕ್ರೋಶ ಮನುವಾದ ಜೀವಂತವಾಗಿರಿಸುವ ಹುನ್ನಾರ ಗಿರಿಯಪ್ಪ ನೆಲಹಾಳ



ರಾಯಚೂರು,ಆ.19–

ಇತ್ತೀಚೆಗೆ ನಡೆದ ಉತ್ತರಾಖಂಡದ ಹಲ್ದ್ವಾನಿಯ ರಾಮಲೀಲ ಮೈದಾನದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಭಾಷಣ ಮಾಡಿದ ಬಳಿಕ ಗಂಗಾಜಲ ಶುದ್ಧೀಕರಣ ಮಾಡಿದ್ದು ಖಂಡನೀಯ. ಒಬ್ಬ ದಲಿತ ವರ್ಗದ ನಾಯಕರು ರಾಷ್ಟ್ರ ಮಟ್ಟದಲ್ಲಿ ಬೆಳೆದಿದ್ದನ್ನು ಸಹಿಸದ ಮನುವಾದಿಗಳು ಅವರಿಗೆ ಅವಮಾನ ಮಾಡಿದ್ದು ಅವರ ವಿರುದ್ಧ ಎಸ್ ಸಿ,ಎಸ್ ಟಿ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕಾಂಗ್ರೆಸ್ ಹಿರಿಯ ಮುಖಂಡ ಗಿರಿಯಪ್ಪ ನೆಲಹಾಳ ಒತ್ತಾಯಿಸಿದರು.

ಅವರು ಈ ಕುರಿತು ಬುಧವಾರ ಪತ್ರಿಕಾ ಹೇಳಿಕೆ ನೀಡಿ, ಮಲ್ಲಿಕಾರ್ಜುನ ಖರ್ಗೆ ಅವರು ಭಾಗವಹಿಸಿದ ಕಾರ್ಯಕ್ರಮದ ಬಳಿಕ ಶುದ್ಧೀಕರಣ ಹೆಸರಿನಲ್ಲಿ ಶ್ರೀರಾಮ ಸೇನೆ ಅಂಥ ಭಕ್ತರು ಮನುಸ್ಮೃತಿ ಯನ್ನು ಹೇರುತ್ತಿದ್ದಾರೆ. ಇದಕ್ಕೆ ನೇರ ಹೊಣೆ ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಷಾ ಹಾಗೂ ಆರ್ ಎಸ್ ಎಸ್

ನಾಯಕ ಮೋಹನ್ ಭಾಗವತ್ ಅವರೇ. ಈ ಘಟನೆಯನ್ನು ಖಂಡಿಸದೆ ಅವಮಾನ ಮಾಡಿದ ಆ ಸಂಘಟನೆಗೂ ಬಿಜೆಪಿಗೂ ಸಂಬಂಧ ವಿಲ್ಲ ಎಂದು ಹೇಳಿಕೆ ನೀಡಿರುವುದು ಅವರು ಪರೋಕ್ಷವಾಗಿ ಸಮರ್ಥಿಸಿಕೊಳ್ಳಲು ಮುಂದಾಗಿದ್ದಾರೆ. ಜಾತ್ಯತೀತ ರಾಷ್ಟ್ರವನ್ನು ಜಾತಿಗಳಿಂದ ಒಡೆದು ಮನುಸ್ಮೃತಿ ಯನ್ನು ಜೀವಂತವಾಗಿಡುವ ಹುನ್ನಾರವಾಗಿದೆ ಎಂದು ಆರೋಪಿಸಿದರು.

ಕಳೆದ 7-8 ದಶಕಗಳ ಹಿಂದೆ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಇದೇ ಮನುಸ್ಮೃತಿಯ ವಿಚಾರಧಾರೆಯ ವೀರ ಸಾವರ್ಕರ್ ಗೋಳಾಲ್ವಕರ್ ಎಂಬ ಮತೀಯವಾದಿಗಳು ಬಾಬಾ ಸಾಹೇಬರ ಸಿದ್ಧಾಂತ ಗಳಿಗೆ ಅವಮಾನ ಮತ್ತು ದೌರ್ಜನ್ಯ ಎಸಗಿ ಸಿದ್ಧಾಂತ ಅಡಗಿಸುವ ನಿರಂತರವಾಗಿ ಮಾಡುತ್ತಿದ್ದಾರೆ ಇದು ಎಷ್ಟೇ ಪ್ರಯತ್ನಿಸಿದರೂ ಸಾಧ್ಯವಾಗುವುದಿಲ್ಲ. ಈಗಾಗಲೇ ಬಿಜೆಪಿ, ಆರ್ ಎಸ್ಎಸ್ ನಾಯಕರ ಪೊಳ್ಳು ಭರವಸೆ,ಸಿದ್ಧಾಂತವನ್ನು ದೇಶದ ಜನರು ತಿರಸ್ಕರಿಸಿದ್ದಾರೆ ಇದಕ್ಕೆ ದೆಹಲಿಯ ಜಂತರ ಮಂತರ್ ನಲಿಲ್ಲೆಝುನ್ ಜಿ ಸಮುದಾಯದ ದೊಡ್ಡ ಹೋರಾಟವೇ ಸಾಕ್ಷಿಯಾಗಿದೆ.

2014 ರಲ್ಲಿ ಇದೇ ಮನುವಾದಿಗಳ ವಂಶಸ್ಥರಾದ ಮೋದಿಯವರು ಬಾಬಾ ಸಾಹೇಬ ಅಂಬೇಡ್ಕರ್ ಅವರ ಪಾದಗಳನ್ನು ನಮಿಸಿ ಲೋಕಸಭೆ ಪ್ರವೇಶಿಸಿದ್ದರು.ಈಗ ಅವರ ವಿಚಾರಧಾರೆಯುಳ್ಳ ಖರ್ಗೆ ಸೇರಿದಂತೆ ಅನೇಕರನ್ನು ಗುರಿಯಾಗಿಸಿ ಬೌದ್ಧಿಕ ದಾಳಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಅಮಿತ್ ಷಾ ಅವರು ಒಮ್ಮೆ ಲೋಕಸಭೆಯಲ್ಲಿ ಮಾತನಾಡುತ್ತಾ ಅಂಬೇಡ್ಕರ್, ಅಂಬೇಡ್ಕರ್ ಎನ್ನುವುದನ್ನು ಬಿಟ್ಟು ಶಿವನನ್ನು ಸ್ಮರಿಸಿದರೆ ಸ್ವರ್ಗ ಲಭಿಸುತಿತ್ತು ಎಂದು ಮಾತನಾಡಿದ್ದು ಹಾಸ್ಯಾಸ್ಪದ. ಯಾಕೆಂದರೆ ಈ ದೇಶದ ಸಂವಿಧಾನ ಒಂದೇ ಧರ್ಮವನ್ನು ಪ್ರೋತ್ಸಾಹಿಸುವುದಿಲ್ಲ ಎಲ್ಲಾಧರ್ಮಗಳಿಗೂ ಸಮಾನ ಅವಕಾಶನೀಡಿದೆ. ಇವರ ಪಾಪಕೃತ್ಯ ಮುಂದಿನ ದಿನಗಳಲ್ಲಿ ಅಂತ್ಯಕಾಲದಲ್ಲಿ ಕರ್ಮವನ್ನು ಅನುಭವಿಸುವುದು ಭಾರತಿಯರು ಎದುರು ನೋಡುತ್ತಿದ್ದಾರೆ.

ಇವತ್ತಲ್ಲ ನಾಳೆ, ಮುಂದಿನ ಕಾಲಘಟ್ಟದಲ್ಲಿ ಇದೇ ಮನುವಾದದ ಕುಡಿಗಳು ಖರ್ಗೆ ಅವರನ್ನು ಕೈ ಮುಗಿದು ಗೌರವಿಸಿ ಅವರ ಸಿದ್ಧಾಂತವನ್ನು ಹೊಗಳುವ ಕಾಲ ದೂರವಿಲ್ಲ ಎಂದು ಹೇಳಿದರು.

ಖರ್ಗೆ ಅವರಿಗೆ ಆದ ಅವಮಾನ ದೇಶದ ದಲಿತ, ಶೋಷಿತ, ಧ್ವನಿ ಇಲ್ಲದ ಸಮುದಾಯಕ್ಕೂ ಆದ ಅನ್ಯಾಯ. ಇದು ಮಾನವ ಹಕ್ಕುಗಳ ಉಲ್ಲಂಘನೆ ಹಾಗೂ ಎಸ್ ಸಿ, ಎಸ್ ಟಿ ದೌರ್ಜನ್ಯ ತಡೆ ಕಾಯ್ದೆಯ ಉಲ್ಲಂಘನೆಯಾಗಿದೆ. ಈ ಕೂಡಲೇ ದುಶ್ಕೃತ್ಯ ಎಸಗಿದ ಕಿಡಿಗೇಡಿಗಳನ್ನು ಬಂಧಿಸಿ ಇದಕ್ಕೆ ಕುಮ್ಮಕ್ಕು ನೀಡಿದ ದುಷ್ಟ ಶಕ್ತಿಗಳಿಗೆ ಶಿಕ್ಷೆ ವಿಧಿಸಬೇಕು. ಇಲ್ಲದಿದ್ದರೆ ಈ ದೇಶದ ಜನ ನಿಮಗೆ ತಕ್ಕ ಪಾಠ ಕಲಿಸುವ ಕಾಲ ದೂರವಿಲ್ಲ ಎಂದು ಎಚ್ಚರಿಕೆ ನೀಡಿದರು

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಲೋಪವಾದರೆ ಶಿಸ್ತುಕ್ರಮ : ಪಿ.ಟಿ.ಪರಮೇಶ್ವರ ನಾಯ್ಕ



ಕಲಬುರಗಿ,ಆ.19–

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪುವಂತೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಕರ್ತವ್ಯ ಲೋಪ ಅಥವಾ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಹಾಗೂ ಮಾಜಿ ಸಚಿವ ಪಿ.ಟಿ. ಪರಮೇಶ್ವರ ನಾಯ್ಕ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಹೊಸ ಸಭಾಂಗಣದಲ್ಲಿ ಮಂಗಳವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 5,97,957 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. ಮೃತಪಟ್ಟಿರುವ 9,156 ಫಲಾನುಭವಿಗಳ ಪ್ರಕರಣಗಳಲ್ಲಿ ಈಗಾಗಲೇ 2.14 ಕೋಟಿ ರೂ. ವಸೂಲಿ ಮಾಡಿ ಸರ್ಕಾರಿ ಖಜಾನೆಗೆ ಜಮೆ ಮಾಡಲಾಗಿದೆ. ಬಾಕಿ ಇರುವ ಸುಮಾರು 2.12 ಕೋಟಿ ರೂ. ಮೊತ್ತವನ್ನು ತಕ್ಷಣ ವಸೂಲಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ 32,943 ನಿರುದ್ಯೋಗಿಗಳು ನೋಂದಾಯಿಸಿಕೊಂಡಿದ್ದು, 32,289 ಪದವೀಧರರು ಸೇರಿದಂತೆ 15,690 ಮಹಿಳೆಯರು ಹಾಗೂ 17,253 ಪುರುಷರು ಇದ್ದಾರೆ. ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸಿ ಅರ್ಹ ಯುವಜನರಿಗೆ ಯೋಜನೆಯ ಸೌಲಭ್ಯ ತಲುಪಿಸಬೇಕು ಎಂದರು.

10.50 ಲಕ್ಷಕ್ಕೂ ಅಧಿಕ ಗೃಹಜ್ಯೋತಿ ಫಲಾನುಭವಿಗಳು :

ಗೃಹಜ್ಯೋತಿ ಯೋಜನೆಯಡಿ ಜೆಸ್ಕಾಂ ವ್ಯಾಪ್ತಿಯಲ್ಲಿ 10.50 ಲಕ್ಷಕ್ಕೂ ಅಧಿಕ ಗ್ರಾಹಕರ ನೋಂದಣಿ ಪೂರ್ಣಗೊಂಡಿದೆ. ಪ್ರತ್ಯೇಕ ಮೀಟರ್ ಇಲ್ಲದ ಕಡೆಗಳಲ್ಲಿ ಹೊಸ ಮೀಟರ್ ಅಳವಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ 21.22 ಲಕ್ಷ ಫಲಾನುಭವಿಗಳಿಗೆ ಪ್ರತಿ ತಿಂಗಳು 7 ಕೆ.ಜಿ. ಅಕ್ಕಿ ಹಾಗೂ 3 ಕೆ.ಜಿ. ಜೋಳ ವಿತರಿಸಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಶಕ್ತಿ ಯೋಜನೆಯಿಂದ ಕೆಕೆಆರ್‌ಟಿಸಿ ಬಸ್‌ಗಳ ಲೋಡ್ ಫ್ಯಾಕ್ಟರ್ ಶೇ.85ಕ್ಕೆ ಏರಿಕೆಯಾಗಿದ್ದು, ಪ್ರಯಾಣಿಕರ ಬೇಡಿಕೆಗೆ ಅನುಗುಣವಾಗಿ 400 ಹೊಸ ಬಸ್‌ಗಳನ್ನು ಸೇರ್ಪಡೆಗೊಳಿಸಲಾಗುತ್ತಿದೆ. ಉಚಿತ ಬಸ್ ಪಾಸ್ ಯೋಜನೆಯಡಿ ಜಿಲ್ಲೆಯಲ್ಲಿ 1,85,460 ವಿದ್ಯಾರ್ಥಿಗಳಿಗೆ ಪಾಸ್ ವಿತರಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಬ್ಯಾಂಕ್ ಖಾತೆಗಳ ಎನ್‌ಪಿಸಿಐ ಮ್ಯಾಪಿಂಗ್, ಮತದಾರರ ಗುರುತಿನ ಚೀಟಿ ಹಾಗೂ ತೆರಿಗೆದಾರರೆಂದು ತಪ್ಪಾಗಿ ನಮೂದಾಗಿರುವ ಕಾರಣ ಗ್ಯಾರಂಟಿ ಯೋಜನೆಗಳ ಸೌಲಭ್ಯದಿಂದ ವಂಚಿತರಾಗಿರುವ ಬಡ ಕೂಲಿ ಕಾರ್ಮಿಕರ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಪರಮೇಶ್ವರ ನಾಯ್ಕ ಸೂಚಿಸಿದರು.

ಇದೇ ವೇಳೆ ಬಸ್ ನಿಲ್ದಾಣಗಳಲ್ಲಿ ಸಿಸಿಟಿವಿ ಅಳವಡಿಕೆ, ಸ್ವಚ್ಛತೆ ಕಾಪಾಡುವುದು ಹಾಗೂ ಶೌಚಾಲಯಗಳಿಗೆ ಏಕರೂಪದ ಶುಲ್ಕ ನಿಯಮ ಜಾರಿಗೊಳಿಸುವಂತೆ ಕೆಕೆಆರ್‌ಟಿಸಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ, ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಶಶಿಧರ ಕುರೇರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶರಣಪ್ಪ ಸಂಕನೂರ, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾ ನಿರ್ದೇಶಕಿ (ಪ್ರಭಾರ) ಮದುಮತಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ವಿಜಯಕುಮಾರ ಕಟ್ಟಿಮನಿ, ಸೋಮಶೇಖರ ಹಿರೇಮಠ, ನರಸಿಂಹಲು ಕುಂಬಾರ, ನಿರ್ಮಲ ಬರಗಾಲೆ, ಸುರೇಶ ತಿಪ್ಪಶೆಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಮಹೇಶ್ ವಾರದ್ ಚಿತ್ರಗಳಲ್ಲಿ ಮಹಿಳಾ ಸಬಲೀಕರಣದ ಸಂದೇಶ: ರೆಹಮಾನ್ ಪಟೇಲ್



ಕಲಬುರಗಿ,ಆ.19–

ಯುವ ಕಲಾವಿದ ಮಹೇಶ್ ವಾರದ್ ಅವರ ಚಿತ್ರಗಳು ಮಹಿಳಾ ಸಬಲೀಕರಣದ ಮಹತ್ವವನ್ನು ಸಾರುತ್ತಿದ್ದು, ಕಲ್ಪನೆ ಹಾಗೂ ಫ್ಯಾಂಟಸಿ ಆಧಾರಿತ ವಿಶಿಷ್ಟ ಕಲಾ ಪ್ರಕಾರದ ಮೂಲಕ ಸಮಕಾಲೀನ ವಿಚಾರಗಳನ್ನು ಪ್ರತಿಬಿಂಬಿಸುತ್ತವೆ ಎಂದು ರಾಯಲ್ ಅಕಾಡೆಮಿ ಅಧ್ಯಕ್ಷ ರೆಹಮಾನ್ ಪಟೇಲ್ ಹೇಳಿದರು.

ನಗರದ ಆರ್ಯನ್ ಶಾಲಾ ಆವರಣದಲ್ಲಿರುವ ಧರಂಸಿಂಗ್ ಕಲಾ ಗ್ಯಾಲರಿಯಲ್ಲಿ ಮಂಗಳವಾರ ಆಯೋಜಿಸಿದ್ದ ಮಹೇಶ್ ವಾರದ್ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.

ಮಹೇಶ್ ವಾರದ್ ಅವರ ಚಿತ್ರಗಳಲ್ಲಿನ ಕಲ್ಪನಾತ್ಮಕ ಅಂಶಗಳು ವೀಕ್ಷಕರನ್ನು ಆಕರ್ಷಿಸುತ್ತವೆ. ಮಹಿಳಾ ಸಬಲೀಕರಣದಂತಹ ಪ್ರಮುಖ ಸಾಮಾಜಿಕ ವಿಚಾರಗಳನ್ನು ಚಿತ್ರಕಲೆಯ ಮೂಲಕ ಪರಿಣಾಮಕಾರಿಯಾಗಿ ಅಭಿವ್ಯಕ್ತಿಪಡಿಸಿರುವುದು ಶ್ಲಾಘನೀಯ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆರ್ಥಿಕ ನೆರವಿನೊಂದಿಗೆ ಚಿತ್ರಕಲಾ ಪ್ರದರ್ಶನ ಆಯೋಜಿಸಲಾಗಿತ್ತು. ಜೆಸ್ಕಾಂ ಅಧ್ಯಕ್ಷ ಪ್ರವೀಣಕುಮಾರ್ ಪಾಟೀಲ್ ಪ್ರದರ್ಶನ ಉದ್ಘಾಟಿಸಿ, ಯುವ ಕಲಾವಿದ ಸಮಕಾಲೀನ ವಿಚಾರಗಳನ್ನು ಚಿತ್ರಗಳ ಮೂಲಕ ಸೃಜನಾತ್ಮಕವಾಗಿ ಮೂಡಿಸಿರುವುದನ್ನು ಶ್ಲಾಘಿಸಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಬಲಪಡಿಸಲು ಕರೆ



ಜೇವರ್ಗಿ,ಆ.19–

ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಹತ್ವದ ಸಭೆ ನಡೆಯಿತು.

ರಾಜ್ಯ ಕಾರ್ಯಕಾರಿಣಿ ಸದಸ್ಯ ನಾಗಣ್ಣ ಬಡಿಗೇರ ಅವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾ ಸಂಚಾಲಕ ಸಂಜೀವಕುಮಾರ್ ಜವಳಕರ್ ಅವರ ಮಾರ್ಗದರ್ಶನದಲ್ಲಿ ಸಭೆ ಆಯೋಜಿಸಲಾಗಿತ್ತು. ವಿಭಾಗೀಯ ಸಂಚಾಲಕ ಶ್ರೀನಿವಾಸ್ ಖೇಳಗಿ, ಸಂಘಟನಾ ಸಂಚಾಲಕರಾದ ಬಾಬುರಾವ್ ಶಳ್ಳಗಿ, ಶ್ರೀಹರಿ ಕರಕಳ್ಳಿ ಸೇರಿದಂತೆ ತಾಲೂಕಿನ ವಿವಿಧ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಸಭೆಯಲ್ಲಿ ಸದಸ್ಯತ್ವ ಅಭಿಯಾನ ವಿಸ್ತರಣೆ, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಕುಂದುಕೊರತೆಗಳ ಪರಿಹಾರ, ವಿವಿಧ ಹಂತಗಳ ನಡುವೆ ಸಮನ್ವಯ ಹಾಗೂ ಗ್ರಾಮದಿಂದ ತಾಲೂಕು ಮಟ್ಟದವರೆಗೆ ಸಂಘಟನೆಯನ್ನು ಸದೃಢಗೊಳಿಸುವ ಕುರಿತು ಸಮಗ್ರ ಚರ್ಚೆ ನಡೆಯಿತು.

ಸಂಘಟನೆಯ ಬೆಳವಣಿಗೆಗೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಸಂಘಟನೆಯ ಆಶಯಗಳನ್ನು ಜನರಿಗೆ ತಲುಪಿಸುವ ಜತೆಗೆ, ದಲಿತರು ಹಾಗೂ ಶೋಷಿತ ಸಮುದಾಯಗಳ ಸಮಸ್ಯೆಗಳಿಗೆ ಸ್ಪಂದಿಸಿ ಹೋರಾಟ ರೂಪಿಸಬೇಕು ಎಂದು ಸಭೆಯಲ್ಲಿ ಕರೆ ನೀಡಲಾಯಿತು.

ಸಭೆಯಲ್ಲಿ ತಾಲೂಕು ಸಂಚಾಲಕ ಸಿದ್ದು ಕೆರೂರ, ಸಂಘಟನಾ ಸಂಚಾಲಕರಾದ ರೇವಣಸಿದ್ದ ಬೀರಾಳ, ಯಶವಂತರಾಯ ಬಡಿಗೇರ, ಜೈಭೀಮ್ ನರಿಬೋಳ, ಬಸವರಾಜ ವರ್ಚನಳ್ಳಿ, ಶರಣಬಸಪ್ಪ ಲಖಣಪುರ, ಬೀರಲಿಂಗ ಕೆಲ್ಲೂರು, ಸಚಿನ್ ಮಂದೇವಾಲ, ಖಲೀಫ್ ಮಂದ್ರವಾಡ, ಮಲ್ಲಿನಾಥ ಹೆಗಡೆ, ತಿಪ್ಪಣ್ಣ ಅಣಬಿ, ಯಡ್ರಾಮಿ ಸಂಚಾಲಕ ಮಾಡಿವಾಳ ಸಾಗರ, ಮೌನೇಶ ಅಂಬರಖೇಡ, ಯಲ್ಲಪ್ಪ ನೆದಲಗಿ ಸೇರಿದಂತೆ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

ಸೆ.30ರಂದು ಕಲಬುರಗಿ ವಿಭಾಗ ಪ್ರಥಮ ವಚನ ಸಾಹಿತ್ಯ ಸಮ್ಮೇಳನ



ಕಲಬುರಗಿ,ಆ.19–

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಹಾಗೂ ಕರ್ನಾಟಕ ವಚನ ಸಾಹಿತ್ಯ ಅಕಾಡೆಮಿ ಸಹಯೋಗದಲ್ಲಿ ಸೆಪ್ಟೆಂಬರ್ 30ರಂದು ನಗರದ ಕನ್ನಡ ಭವನದ ಅಂಗಳದಲ್ಲಿ ಕಲಬುರಗಿ ವಿಭಾಗ ಪ್ರಥಮ ವಚನ ಸಾಹಿತ್ಯ ಸಮ್ಮೇಳನ ಆಯೋಜಿಸಲು ನಿರ್ಧರಿಸಲಾಗಿದೆ.

ಕನ್ನಡ ಭವನದಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಈ ಕುರಿತು ನಿರ್ಧಾರ ಕೈಗೊಳ್ಳಲಾಯಿತು. ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ಕಲ್ಲೂರ, ಕರ್ನಾಟಕ ವಚನ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಬಿ.ಎಂ. ಪಾಟೀಲ ಕಲ್ಲೂರ ಹಾಗೂ ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ. ಮಲ್ಲಿಕಾರ್ಜುನ ವಡ್ಡನಕೇರಿ ಮಾತನಾಡಿ, ಕಲುಷಿತಗೊಳ್ಳುತ್ತಿರುವ ಇಂದಿನ ಸಾಮಾಜಿಕ ಪರಿಸ್ಥಿತಿಯಲ್ಲಿ ಬಸವಾದಿ ಶರಣರು ಪ್ರತಿಪಾದಿಸಿದ ಶ್ರಮ ಸಂಸ್ಕೃತಿ, ಸಮಸಂಸ್ಕೃತಿ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರಚುರಪಡಿಸುವುದು ತುರ್ತು ಅಗತ್ಯವಾಗಿದೆ ಎಂದು ಹೇಳಿದರು.

12ನೇ ಶತಮಾನದಲ್ಲಿ ಸಮಾಜದ ಧ್ವನಿ ಇಲ್ಲದವರಿಗೆ ಧ್ವನಿ ನೀಡಿದ ಬಸವಾದಿ ಶರಣರು ದೀನ, ದಲಿತರು ಹಾಗೂ ಶೋಷಿತ ಸಮುದಾಯಗಳಲ್ಲಿ ಆತ್ಮವಿಶ್ವಾಸ, ಸ್ವಾಭಿಮಾನ ಮತ್ತು ಸ್ವಾವಲಂಬನೆಯ ಮನೋಭಾವ ಬೆಳೆಸಿದರು. ದಯೆ, ಮಾನವೀಯತೆ, ಪ್ರೀತಿ, ಕರುಣೆ ಹಾಗೂ ಪರಸ್ಪರ ವಿಶ್ವಾಸವನ್ನು ತಮ್ಮ ಅನುಭವ ಸಾಹಿತ್ಯದ ಅವಿಭಾಜ್ಯ ಅಂಗವನ್ನಾಗಿಸಿಕೊಂಡ ಶರಣರು ಮನುಷ್ಯ ಸಂಬಂಧಗಳನ್ನು ಬೆಸೆದರು ಎಂದು ವಿವರಿಸಿದರು.

ವಚನ ಸಾಹಿತ್ಯವು ಕನ್ನಡ ನಾಡಿಗೆ ಮಾತ್ರವಲ್ಲದೆ ಇಡೀ ವಿಶ್ವಕ್ಕೆ ನೀಡಿದ ವಿಶಿಷ್ಟ ಕೊಡುಗೆಯಾಗಿದೆ. ಇಂದಿನ ಸಮಾಜದಲ್ಲಿ ವೈಚಾರಿಕ ಜಾಗೃತಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ವಚನ ಸಾಹಿತ್ಯದ ಆಶಯಗಳನ್ನು ಯುವಜನತೆ ಸೇರಿದಂತೆ ಎಲ್ಲ ವರ್ಗಗಳಿಗೂ ತಲುಪಿಸುವ ಅಗತ್ಯವಿದೆ ಎಂದು ಹೇಳಿದರು.

ಈ ಬಾರಿ ವಚನ ಸಾಹಿತ್ಯ ಸಮ್ಮೇಳನವನ್ನು ಮತ್ತಷ್ಟು ವೈವಿಧ್ಯಮಯ ಹಾಗೂ ಅರ್ಥಪೂರ್ಣವಾಗಿ ಆಯೋಜಿಸಲು ನಿರ್ಧರಿಸಲಾಗಿದೆ. ಸಮ್ಮೇಳನಾಧ್ಯಕ್ಷರ ಆಯ್ಕೆ ಹಾಗೂ ಸ್ವಾಗತ ಸಮಿತಿಯ ಪದಾಧಿಕಾರಿಗಳ ನೇಮಕವನ್ನು ಶೀಘ್ರದಲ್ಲೇ ನಡೆಸಲಾಗುವುದು. 12ನೇ ಶತಮಾನದ ಅನುಭವ ಮಂಟಪದ ಆಶಯಗಳನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಸಮ್ಮೇಳನವನ್ನು ರೂಪಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಕಸಾಪ ಕಾರ್ಯದರ್ಶಿ ಹಾಗೂ ಕಾರ್ಯಾಧ್ಯಕ್ಷ ಶಿವರಾಜ ಅಂಡಗಿ, ಹಿರಿಯ ಕವಿ ಅಮೃತಪ್ಪ ಅಣೂರ, ಶರಣರಾಜ ಛಪ್ಪರಬಂದಿ, ಜಗದೀಶ ಮರಪಳ್ಳಿ, ವಿದ್ಯಾಸಾಗರ ದೇಶಮುಖ, ರಾಜೇಂದ್ರ ಮಾಡಬೂಳ, ಬಾಬುರಾವ ಪಾಟೀಲ, ಗಣೇಶ ಚಿನ್ನಾಕಾರ, ಸೋಮಶೇಖರಯ್ಯ ಹೊಸಮಠ, ಕಲ್ಯಾಣಕುಮಾರ ಶೀಲವಂತ, ಮಹೇಶ ಚಿಂತನಪಳ್ಳಿ, ಹಣಮಂತರಾವ ಪೆಂಚನಪಳ್ಳಿ, ಶಿವಾನಂದ ಪೂಜಾರಿ, ಧರ್ಮರಾಜ ಜವಳಿ, ದಿನೇಶ ಮದಕರಿ, ಶಕುಂತಲಾ ಪಾಟೀಲ, ಜಯಶ್ರೀ ಜಮಾದಾರ, ರಮೇಶ ಬಡಿಗೇರ, ಸಿದ್ದಲಿಂಗ ಬಾಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಧರಣಿ



ಬೀದರ್,ಆ.19–

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅಕ್ರಮ ವರ್ಗಾವಣೆ ಹಾಗೂ ಅವ್ಯವಹಾರ ಪ್ರಕರಣವನ್ನು ಖಂಡಿಸಿ, ಪ್ರಕರಣದ ನೈತಿಕ ಹೊಣೆ ಹೊತ್ತು ಸಚಿವ ಬಿ. ನಾಗೇಂದ್ರ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಮಂಗಳವಾರ ನಗರದ ಅಂಬೇಡ್ಕರ್ ವೃತ್ತದ ಸಮೀಪದ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಯಿತು.

ಧರಣಿಯಲ್ಲಿ ಮಾತನಾಡಿದ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ, ವಾಲ್ಮೀಕಿ ಅಭಿವೃದ್ಧಿ ನಿಗಮವು ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸುವ ಪ್ರಮುಖ ಸಂಸ್ಥೆಯಾಗಿದೆ. ನಿಗಮದ ಕೋಟ್ಯಂತರ ರೂಪಾಯಿ ಹಣವನ್ನು ಅಕ್ರಮವಾಗಿ ವಿವಿಧ ಖಾತೆಗಳಿಗೆ ವರ್ಗಾವಣೆ ಮಾಡಿರುವ ಆರೋಪ ಗಂಭೀರವಾಗಿದ್ದು, ಇದರಿಂದ ಹಿಂದುಳಿದ ವರ್ಗಗಳಿಗೆ ಕಾಂಗ್ರೆಸ್ ಸರ್ಕಾರ ಅನ್ಯಾಯ ಮಾಡಿರುವುದು ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು.

ಪ್ರಕರಣ ರಾಜ್ಯಾದ್ಯಂತ ಚರ್ಚೆಯಾಗುತ್ತಿದ್ದರೂ ಮುಖ್ಯಮಂತ್ರಿ ನೇತೃತ್ವದ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿದೆ ಎಂದು ಅವರು ದೂರಿದರು. ಪ್ರಕರಣದ ನೈತಿಕ ಹೊಣೆ ಹೊತ್ತು ಬಿ. ನಾಗೇಂದ್ರ ರಾಜೀನಾಮೆ ನೀಡಬೇಕು. ಅವ್ಯವಹಾರದಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬರ ವಿರುದ್ಧವೂ ಕಠಿಣ ಕಾನೂನು ಕ್ರಮ ಕೈಗೊಂಡು, ಸಾರ್ವಜನಿಕರ ಹಣವನ್ನು ಸಂಪೂರ್ಣವಾಗಿ ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್ ಮಾತನಾಡಿ, ಬಿ. ನಾಗೇಂದ್ರ ಅವರ ರಾಜೀನಾಮೆ ಪಡೆಯುವವರೆಗೆ ಬಿಜೆಪಿ ಹೋರಾಟ ನಿಲ್ಲಿಸುವುದಿಲ್ಲ. ವಿಧಾನಸಭೆಯ ಒಳಗೂ ಹಾಗೂ ಹೊರಗೂ ಹೋರಾಟ ಮುಂದುವರಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಘುನಾಥರಾವ್ ಮಲ್ಕಾಪುರೆ, ಪೀರಪ್ಪಾ ಯರನಳ್ಳಿ, ವಿಜಯಕುಮಾರ್ ಪಾಟೀಲ್ ಗಾದಗಿ, ಶಶಿಧರ್ ಹೊಸಳ್ಳಿ, ಬಾಬುವಾಲಿ, ಶ್ರೀನಿವಾಸ್ ಚೌದ್ರಿ, ಈಶ್ವರಸಿಂಗ್ ಠಾಕೂರ್, ಗುರುನಾಥ್ ಜಾಂತಿಕರ್, ರಾಜಕುಮಾರ್ ನೇಮತಾಬಾದ್, ದೀಪಕ್ ಗಾದಗೆ, ರಾಜಶೇಖರ್ ನಾಗಮೂರ್ತಿ, ರಾಜು ಚಿದ್ರಿ, ಜಿಲ್ಲಾ ಹಾಗೂ ಮಂಡಲ ಪದಾಧಿಕಾರಿಗಳು, ಜನಪ್ರತಿನಿಧಿಗಳು, ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಕೆಪಿಎಸ್‌ಸಿಯ ಭ್ರಷ್ಟ ರೋಗಕ್ಕೆ ಅರೆಬರೆ ತೇಪೆ ಸಾಕು; ಶಾಶ್ವತ ಮದ್ದು ಬೇಕು!

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ)ದ ಸುತ್ತ ದಶಕಗಳಿಂದ ಕವಿದಿರುವ ಭ್ರಷ್ಟಾಚಾರದ ಕಾರ್ಮೋಡ ಕರಗುವ ಲಕ್ಷಣಗಳೇ ಕಾಣುತ್ತಿಲ್ಲ. ಅಧ್ಯಕ್ಷರ ಅಮಾನತು, ಮರುನೇಮಕ, ನ್ಯಾಯಾಲಯದ ಮಧ್ಯಪ್ರವೇಶ, ಇಡಿ ದಾಳಿಗಳೆಲ್ಲವೂ ರಾಜ್ಯದ ಉನ್ನತ ನೇಮಕಾತಿ ಸಂಸ್ಥೆಯೊಂದರ ದುಸ್ಥಿತಿಗೆ ಸಾಕ್ಷಿ. ಪ್ರತಿಬಾರಿ ಆರೋಪ ಬಂದಾಗಲೂ ತೇಪೆ ಹಚ್ಚುವ ಕೆಲಸವಾಗುತ್ತಿದೆಯೇ ಹೊರತು, ಬುಡಕ್ಕೆ ಅಂಟಿರುವ ರೋಗಕ್ಕೆ ಮದ್ದು ಅರೆಯುವ ಪ್ರಯತ್ನಗಳಾಗಿಲ್ಲ. ಆಯೋಗದ ಆಡಳಿತದಲ್ಲಿ ಆಮೂಲಾಗ್ರ ಸುಧಾರಣೆ ತಂದು, ಸಂಪೂರ್ಣ ವ್ಯವಸ್ಥೆಯನ್ನೇ ಶುದ್ಧೀಕರಿಸುವ ಕಾಲ ಈಗ ಬಂದಿದೆ.

ಕೆಪಿಎಸ್‌ಸಿಯಲ್ಲಿನ ಅಕ್ರಮಗಳು ಒಂದೊಂದಾಗಿ ಹೊರಬರುತ್ತಿರುವ ಬೆನ್ನಲ್ಲೇ, ಅಮಾನತುಗೊಂಡಿದ್ದ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರ ಸುತ್ತ ತನಿಖೆಯ ಕುಣಿಕೆ ಬಿಗಿಯಾಗುತ್ತಿದೆ. ನೇಮಕಾತಿ ಹಗರಣಗಳಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಮಂಗಳವಾರ ರಾಜ್ಯದ ವಿವಿಧೆಡೆ ಸುಮಾರು 21 ಸ್ಥಳಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದೆ. ಕೆಪಿಎಸ್‌ಸಿ ಕೇಂದ್ರ ಕಚೇರಿಯಿಂದ ಹಿಡಿದು ಶಿವಶಂಕರಪ್ಪ ಅವರ ನಿವಾಸ, ಆಯೋಗದ ಸದಸ್ಯೆ ಶಾಂತಾ ಹೊಸಮನಿ ಅವರ ಮನೆ, ಮಧ್ಯವರ್ತಿಗಳೆಂದು ಶಂಕಿಸಲಾಗಿರುವವರ ಸ್ಥಳಗಳು, ಆಯ್ಕೆಯಾದ ಅಭ್ಯರ್ಥಿಗಳ ಆವರಣ, ಪರೀಕ್ಷೆಯ ಡಿಜಿಟಲ್ ಮೌಲ್ಯಮಾಪನ ನಡೆಸಿದ ಸಂಸ್ಥೆಯ ಕಚೇರಿಯವರೆಗೆ ಇಡಿ ಶೋಧ ನಡೆಸಿದೆ. ನೇಮಕಾತಿ ಅಕ್ರಮದ ಆರೋಪ ಈಗ ಆಯೋಗದ ಗೋಡೆ ದಾಟಿ ಕೇಂದ್ರ ತನಿಖಾ ಸಂಸ್ಥೆಯ ಬಾಗಿಲು ತಟ್ಟಿದೆ.

ವಿಶೇಷವಾಗಿ 400 ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಹಗರಣದ ಆರೋಪಗಳು ಗಾಬರಿಗೊಳಿಸುತ್ತವೆ. ಪರೀಕ್ಷೆಗೂ ಮುನ್ನವೇ ಕನಿಷ್ಠ 29 ಅಭ್ಯರ್ಥಿಗಳಿಗೆ ಪ್ರಶ್ನೆಪತ್ರಿಕೆ ಅಕ್ರಮವಾಗಿ ಲಭ್ಯವಾಗಿತ್ತು, ಅಂತಿಮ ಆಯ್ಕೆ ಪಟ್ಟಿಯಲ್ಲಿ ಅಧ್ಯಕ್ಷರು, ಆಯೋಗದ ಸದಸ್ಯರು ಹಾಗೂ ಸಿಬ್ಬಂದಿಯ ಸಂಬಂಧಿಕರು ಅಗ್ರಸ್ಥಾನ ಪಡೆದಿದ್ದರು, ಪರೀಕ್ಷೆ ಬಳಿಕ ಮಧ್ಯವರ್ತಿಗಳು ಅಭ್ಯರ್ಥಿಗಳನ್ನು ಸಂಪರ್ಕಿಸಿ, ಒಎಂಆರ್ ಶೀಟ್‌ಗಳನ್ನು ತಿದ್ದಿ ಆಯ್ಕೆ ಮಾಡಿಸುವುದಾಗಿ ಹೇಳಿ ₹80 ಲಕ್ಷದವರೆಗೂ ಹಣ ಕೇಳಿದ್ದರು, ಅಧ್ಯಕ್ಷರ ಸಂಬಂಧಿ ಎನ್ನಲಾದವರೊಬ್ಬರು ಹಿಂದೆ ಪದವಿಯಲ್ಲಿ ಕೆಲವು ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದರೂ ಕೆಪಿಎಸ್‌ಸಿ ಪರೀಕ್ಷೆಯಲ್ಲಿ 450ಕ್ಕೂ ಹೆಚ್ಚು ಅಂಕ ಗಳಿಸಿದ್ದಾರೆ ಎಂಬಿತ್ಯಾದಿ ಆರೋಪಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಹುಳುಕಿದೆ ಎನ್ನುವುದನ್ನಂತೂ ಬಯಲು ಮಾಡಿವೆ.

ಶಿವಶಂಕರಪ್ಪ ಅವರ ಪುತ್ರಿ, ನಕಲಿ ಆದಾಯ ಪ್ರಮಾಣಪತ್ರ ಬಳಸಿ ಒಬಿಸಿ ಕೋಟಾದಡಿ ಹುದ್ದೆ ಪಡೆದಿದ್ದಾರೆ ಎಂಬ ಆರೋಪದ ಮೇಲೆ ರಾಜ್ಯಪಾಲರು ಕಳೆದ ಜುಲೈ 10ರಂದು ಅವರನ್ನು ಅಮಾನತುಗೊಳಿಸಿದ್ದರು. ಅವರ ನಿರೀಕ್ಷಣಾ ಜಾಮೀನು ಅರ್ಜಿ ಆಗಸ್ಟ್ 11ರಂದು ನ್ಯಾಯಾಲಯದಲ್ಲಿ ವಜಾಗೊಂಡಿತ್ತು. ಮತ್ತೊಂದೆಡೆ, ವಶಪಡಿಸಿಕೊಂಡಿರುವ 329 ಒಎಂಆರ್ ಶೀಟ್‌ಗಳ ವಿಧಿವಿಜ್ಞಾನ ಪರೀಕ್ಷೆ ನಡೆಯುತ್ತಿದೆ. ಈ ನಡುವೆ ಆಗಸ್ಟ್ 20ರಂದು ಕರ್ನಾಟಕ ಹೈಕೋರ್ಟ್‌ನಲ್ಲಿ ಅವರ ವಿರುದ್ಧ ಎರಡು ಪ್ರತ್ಯೇಕ ಹಗರಣಗಳ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಕೋರಿ ಸಲ್ಲಿಸಲಾಗಿರುವ ಅರ್ಜಿಗಳ ವಿಚಾರಣೆ ನಡೆಯಲಿದೆ. ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಹಾಗೂ ವೈದ್ಯ ಮಂಜುನಾಥ್ ಪ್ರತ್ಯೇಕವಾಗಿ ಸಿಬಿಐ ತನಿಖೆಗೆ ಮನವಿ ಮಾಡಿದ್ದಾರೆ. ಈಗಾಗಲೇ ರಾಜ್ಯದ ಸಿಐಡಿ ತನಿಖೆ ನಡೆಸುತ್ತಿರುವ ಪ್ರಕರಣಕ್ಕೆ ಇಡಿ ಪ್ರವೇಶಿಸಿದೆ.

1951ರಲ್ಲಿ ಸ್ಥಾಪನೆಯಾದ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಏಳು ದಶಕಗಳಿಗೂ ಹೆಚ್ಚು ಇತಿಹಾಸವಿದೆ. ರಾಜ್ಯದ ಸರ್ಕಾರಿ ಸೇವೆಗಳಿಗೆ ಅರ್ಹರನ್ನು ಆಯ್ಕೆ ಮಾಡುವ ಅತ್ಯಂತ ಮಹತ್ವದ ಸಾಂವಿಧಾನಿಕ ಸಂಸ್ಥೆಯೊಂದು, ಸುದೀರ್ಘ ಇತಿಹಾಸದ ಬಳಿಕವೂ ನೇಮಕಾತಿ ಅಕ್ರಮ, ಭ್ರಷ್ಟಾಚಾರ ಆರೋಪಗಳಿಂದ ಮುಕ್ತವಾಗದಿರುವುದು ವಿಷಾದಕರ ಮಾತ್ರವಲ್ಲ, ಆತಂಕಕಾರಿ. ಕೆಪಿಎಸ್‌ಸಿಯ ಸುತ್ತಲಿನ ವಿವಾದಗಳನ್ನು ಕೆದಕಿದರೆ, ಇದು ಯಾವುದೋ ಒಂದೆರಡು ಅಧಿಕಾರಿಗಳ ವ್ಯಕ್ತಿಗತ ತಪ್ಪುಗಳಿಂದ ಹಿಡಿದು ವ್ಯವಸ್ಥೆಯೊಳಗೆ ಕಾಲಕಾಲಕ್ಕೆ ಮರುಕಳಿಸುತ್ತಿರುವ ಸಾಂಕ್ರಾಮಿಕ ರೋಗ ಎಂಬ ಕಟು ಸತ್ಯವನ್ನು ಸ್ಪಷ್ಟಪಡಿಸುತ್ತದೆ.

1998, 1999 ಮತ್ತು 2004ರ ಗೆಜೆಟೆಡ್ ಪ್ರೊಬೇಷನರ್‌ಗಳ ನೇಮಕಾತಿಯಲ್ಲಿನ ಅಕ್ರಮಗಳ ಆರೋಪಗಳು ಕೆಪಿಎಸ್‌ಸಿ ಇತಿಹಾಸದ ಹಳೆಯ ಕಪ್ಪು ಅಧ್ಯಾಯಗಳಲ್ಲೊಂದು. ಆಗ ಆಯೋಗದ ಅಧ್ಯಕ್ಷರಾಗಿದ್ದ ಡಾ. ಎಚ್.ಎನ್. ಕೃಷ್ಣ ಅವರ ಅವಧಿಯ ನೇಮಕಾತಿಯಲ್ಲಿ ಅರ್ಹತೆ ಇಲ್ಲದವರು ಆಯ್ಕೆಯಾಗಿದ್ದಾರೆ, ಪರೀಕ್ಷೆಯನ್ನೇ ಬರೆಯದವರಿಗೆ ಅವಕಾಶ ಕಲ್ಪಿಸಲಾಗಿದೆ, ನಕಲಿ ಅಂಕಪಟ್ಟಿಗಳನ್ನು ಬಳಸಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದವು. ಪ್ರಕರಣಗಳು ಕೊನೆಗೆ ನ್ಯಾಯಾಲಯದ ಮೆಟ್ಟಿಲೇರಿ, ತನಿಖೆಯ ಹಂತಕ್ಕೂ ತಲುಪಿದವು. 2011ರ ಅಕ್ಟೋಬರ್‌ನಲ್ಲಿ ಸಿಐಡಿ ಕೃಷ್ಣ ಅವರನ್ನು ಬಂಧಿಸಿತ್ತು. ಸಿಐಡಿ ವರದಿಯಲ್ಲೂ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿರುವುದನ್ನು ಉಲ್ಲೇಖಿಸಲಾಗಿತ್ತು. ಬಳಿಕ 2011ರಿಂದ 2013ರವರೆಗಿನ ಅವಧಿ ಮತ್ತೊಂದು ಕಪ್ಪು ಅಧ್ಯಾಯ. ಗೋನಾಳ್ ಭೀಮಪ್ಪ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಆರಂಭವಾದ 326 ಗೆಜೆಟೆಡ್ ಎ ಮತ್ತು ಬಿ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮದ ಆರೋಪಗಳು ಪರೀಕ್ಷೆಯಿಂದ ಮೌಲ್ಯಮಾಪನ, ಸಂದರ್ಶನದವರೆಗೂ ವ್ಯಾಪಿಸಿದವು. ಸಿಐಡಿ ತನಿಖೆಯ ಪ್ರಕಾರ, ಆಯ್ಕೆ ಮಾಡಿದ ಮೌಲ್ಯಮಾಪಕರ ಮೂಲಕ ಮುಖ್ಯ ಪರೀಕ್ಷೆಯ ಮೌಲ್ಯಮಾಪನದಲ್ಲಿ ಹಸ್ತಕ್ಷೇಪ ಮಾಡಲಾಗಿದೆ, ವಿಷಯ ಪರಿಣಿತರಲ್ಲದವರಿಂದ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿಸಲಾಗಿದೆ ಎಂಬ ಆರೋಪವೂ ಕೇಳಿಬಂತು. ಅಭ್ಯರ್ಥಿಗಳಿಂದ ಹಣದ ಬೇಡಿಕೆ ಇಡಲಾಗಿದೆ, ಹಣ ಕೊಡದವರಿಗೆ ಸಂದರ್ಶನದಲ್ಲಿ ಕಡಿಮೆ ಅಂಕ ನೀಡಲಾಗಿದೆ ಎಂಬ ಆರೋಪಗಳು ಪ್ರಕರಣವನ್ನು ಮತ್ತಷ್ಟು ಗಂಭೀರಗೊಳಿಸಿದವು. 2012ರಲ್ಲಿ ಪ್ರಾಥಮಿಕ ಮತ್ತು ಮುಖ್ಯ ಪರೀಕ್ಷೆಗಳು, 2013ರಲ್ಲಿ ಸಂದರ್ಶನಗಳು ನಡೆದ ಈ ನೇಮಕಾತಿ ಪ್ರಕ್ರಿಯೆಯೂ ಕೊನೆಗೆ ಸಿಐಡಿ ತನಿಖೆಯ ಸುಳಿಗೆ ಸಿಲುಕಿತು. ಅರ್ಹತೆಯ ಆಧಾರದಲ್ಲಿ ಸರ್ಕಾರಿ ಉದ್ಯೋಗ ಪಡೆಯಬೇಕಿದ್ದ ಅಭ್ಯರ್ಥಿಗಳು ವರ್ಷಗಳ ಪರಿಶ್ರಮದ ಬಳಿಕವೂ ಅನಿಶ್ಚಿತತೆಯಲ್ಲೇ ಉಳಿಯಬೇಕಾಯಿತು. ಒಂದು ನೇಮಕಾತಿ ಸಂಸ್ಥೆಯ ವೈಫಲ್ಯದ ಬೆಲೆಯನ್ನ ಅಭ್ಯರ್ಥಿಗಳು ಕಟ್ಟಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು ಇಲ್ಲೇ.

2015ರಲ್ಲಿ ಮತ್ತೆ ಪ್ರಶ್ನೆಪತ್ರಿಕೆ ಸಂಬಂಧಿತ ಅವ್ಯವಸ್ಥೆ ತಲೆದೋರಿತು. ಗೆಜೆಟೆಡ್ ಪ್ರೊಬೇಷನರ್ ಪರೀಕ್ಷೆಯಲ್ಲಿ ನಿಗದಿತ ದಿನದ ಬದಲು ಮುಂದಿನ ದಿನಗಳ ಪ್ರಶ್ನೆಪತ್ರಿಕೆಗಳು ಅಭ್ಯರ್ಥಿಗಳಿಗೆ ಹಂಚಿಕೆಯಾಗಿವೆ ಎಂಬ ಆರೋಪಗಳೆದ್ದವು. 2019-20ರ ವೇಳೆಗೆ ವಿವಾದದ ಸ್ವರೂಪ ಮತ್ತಷ್ಟು ಬದಲಾಯಿತು. ಉತ್ತರಪತ್ರಿಕೆಗಳ ಮೌಲ್ಯಮಾಪನ, ಅಂಕಗಳ ನೀಡಿಕೆ, ವಿಷಯ ಪರಿಣಿತರಲ್ಲದವರಿಂದ ಮೌಲ್ಯಮಾಪನ, ಡಿಜಿಟಲ್ ಮೌಲ್ಯಮಾಪನದಲ್ಲಿನ ಲೋಪಗಳು ಸೇರಿದಂತೆ ಹಲವು ಆರೋಪಗಳು ನ್ಯಾಯಾಲಯದವರೆಗೆ ತಲುಪಿದವು. ಪ್ರಶ್ನೆಪತ್ರಿಕೆ ಲೀಕ್ ಆಗುವುದ ಬಿಡಿ, ಉತ್ತರಪತ್ರಿಕೆಯ ಮೌಲ್ಯಮಾಪನವೇ ಅನುಮಾನಕ್ಕೊಳಗಾದರೆ, ವಿಶ್ವಾಸಾರ್ಹತೆ ಉಳಿಯುವುದು ಹೇಗೆ? 1998ರ ಜೆ.ಎಚ್. ಪಟೇಲ್ ನೇತೃತ್ವದ ಜನತಾ ದಳ ಸರ್ಕಾರದಿಂದ ಹಿಡಿದು ಇಂದಿನ ಕಾಂಗ್ರೆಸ್‌ವರೆಗೆ ಸರ್ಕಾರಗಳು ಬದಲಾಗಿವೆ, ಮುಖ್ಯಮಂತ್ರಿಗಳು ಬದಲಾಗಿದ್ದಾರೆ, ಕೆಪಿಎಸ್‌ಸಿ ಅಧ್ಯಕ್ಷರು ಮತ್ತು ಸದಸ್ಯರೂ ಬದಲಾಗಿದ್ದಾರೆ. ಆದರೆ ಅಕ್ರಮಗಳ ಸರಣಿ ಮಾತ್ರ ನಿಂತಿಲ್ಲ.

ಈಗ 2026ರಲ್ಲಿ ಮತ್ತೊಮ್ಮೆ ಕೆಪಿಎಸ್‌ಸಿ ಗಂಭೀರ ಆರೋಪಗಳ ಕೇಂದ್ರವಾಗಿದೆ. ಇಷ್ಟೆಲ್ಲ ಆರೋಪಗಳು, ತನಿಖೆಗಳು, ನ್ಯಾಯಾಂಗ ಮಧ್ಯಪ್ರವೇಶಗಳು ಮತ್ತು ನೇಮಕಾತಿ ಪ್ರಕ್ರಿಯೆ ರದ್ದಾದ ಉದಾಹರಣೆಗಳ ಬಳಿಕವೂ ಕೆಪಿಎಸ್‌ಸಿಯಲ್ಲಿ ಮೂಲಭೂತ ಬದಲಾವಣೆ ಏಕೆ ಸಾಧ್ಯವಾಗಿಲ್ಲ? ವರ್ಷಗಳು ಕಳೆದಿವೆ, ತಂತ್ರಜ್ಞಾನ ಬದಲಾಗಿದೆ, ಪರೀಕ್ಷಾ ವಿಧಾನಗಳೂ ಬದಲಾಗಿವೆ. ಆದರೆ ಆರೋಪಗಳ ಮೂಲ ಸ್ವರೂಪ ಮಾತ್ರ ಹಾಗೇ ಇದೆ. ಇದು ಅಧಿಕಾರಿಗಳನ್ನ ಬದಲಿಸುವುದರಿಂದ ಮಾತ್ರ ಸರಿಯಾಗುವ ಸಮಸ್ಯೆಯಂತೂ ಅಲ್ಲ, ಬುಡದಿಂದಲೇ ಕಿತ್ತೊಗೆಯಬೇಕಿರುವ ಕೊಳೆತ ಬೇರು.

ಈಗ ಮಾಡಬೇಕಿರುವುದು ಮತ್ತೊಂದು ತನಿಖಾ ಸಮಿತಿ ರಚಿಸುವುದು, ಮತ್ತೊಬ್ಬ ಅಧಿಕಾರಿಯನ್ನು ಅಮಾನತುಗೊಳಿಸುವುದು ಅಥವಾ ವಿವಾದ ತಣ್ಣಗಾಗುವವರೆಗೆ ಕಾದು ಕೈತೊಳೆದುಕೊಳ್ಳುವುದಲ್ಲ. ಪ್ರಶ್ನೆಪತ್ರಿಕೆ ಸಿದ್ಧಪಡಿಸುವುದರಿಂದ ಹಿಡಿದು ಮುದ್ರಣ, ಸಾಗಣೆ, ಸಂಗ್ರಹ, ಪರೀಕ್ಷಾ ಕೇಂದ್ರಕ್ಕೆ ತಲುಪಿಸುವಿಕೆ, ಉತ್ತರಪತ್ರಿಕೆಗಳ ಡಿಜಿಟಲೀಕರಣ, ಮೌಲ್ಯಮಾಪನ, ಅಂಕಗಳ ಸಂರಕ್ಷಣೆ ಮತ್ತು ಅಂತಿಮ ಫಲಿತಾಂಶ ಪ್ರಕಟಿಸುವವರೆಗಿನ ಪ್ರತಿಯೊಂದು ಹಂತದಲ್ಲೂ ಯಾರಿಗೆ ಯಾವ ಹಂತದಲ್ಲಿ ಪ್ರವೇಶವಿದೆ ಎಂಬುದು ಸಂಪೂರ್ಣ ಸಾರ್ವಜನಿಕವಾಗಬೇಕು. ಒಂದೇ ಹಂತದಲ್ಲಿ ಒಂದೇ ವ್ಯಕ್ತಿ ಅಥವಾ ಸಣ್ಣ ಗುಂಪಿಗೆ ಸಂಪೂರ್ಣ ನಿಯಂತ್ರಣ ಸಿಗದಂತೆ ಬಹುಹಂತದ ಭದ್ರತಾ ವ್ಯವಸ್ಥೆ ರೂಪಿಸಬೇಕು. ಅದನ್ನು ಪಾರದರ್ಶಕಗೊಳಿಸಬೇಕು.

ಅಷ್ಟೇ ಅಲ್ಲ, ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿಯಲ್ಲೂ ಪಾರದರ್ಶಕತೆಯನ್ನು ಕಡ್ಡಾಯಗೊಳಿಸಬೇಕಿದೆ. ಅಧ್ಯಕ್ಷರು, ಸದಸ್ಯರು ಹಾಗೂ ಪ್ರಮುಖ ಅಧಿಕಾರಿಗಳ ವಿರುದ್ಧದ ದೂರುಗಳನ್ನು ಪರಿಶೀಲಿಸುವ ಸ್ವತಂತ್ರ ವ್ಯವಸ್ಥೆ ಇರಬೇಕು. ಹಿತಾಸಕ್ತಿ ಸಂಘರ್ಷವಿರುವ ಸಂದರ್ಭಗಳಲ್ಲಿ ಸಂಬಂಧಿಕರು ಅಥವಾ ಪರಿಚಿತರ ಅಭ್ಯರ್ಥಿಗಳಿರುವ ನೇಮಕಾತಿ ಪ್ರಕ್ರಿಯೆಯಿಂದ ಸಂಬಂಧಪಟ್ಟವರು ಸಂಪೂರ್ಣವಾಗಿ ದೂರ ಉಳಿಯುವಂತೆ ಕಟ್ಟುನಿಟ್ಟಿನ ನಿಯಮ ರೂಪಿಸಬೇಕು. ಎಲ್ಲಕ್ಕಿಂತ ಮುಖ್ಯವಾಗಿ, ಕೆಪಿಎಸ್‌ಸಿಯ ಮೇಲಿನ ನಂಬಿಕೆಯನ್ನು ಮರಳಿ ಕಟ್ಟಬೇಕು. ಪ್ರತಿಯೊಂದು ನೇಮಕಾತಿ ಪರೀಕ್ಷೆಯಲ್ಲೂ ಅಭ್ಯರ್ಥಿಗೆ ತನ್ನ ಉತ್ತರಪತ್ರಿಕೆ ಹೇಗೆ ಮೌಲ್ಯಮಾಪನಗೊಂಡಿತು, ತನ್ನ ಅಂಕ ಹೇಗೆ ನಿಗದಿಯಾಯಿತು, ಆಯ್ಕೆಪಟ್ಟಿ ಯಾವ ಮಾನದಂಡದ ಮೇಲೆ ರೂಪುಗೊಂಡಿತು ಎಂಬುದನ್ನು ಪ್ರಶ್ನಿಸುವ ಮತ್ತು ಪರಿಶೀಲಿಸುವ ಅವಕಾಶ ಇರಬೇಕು. ಯಾರೇ ತಪ್ಪು ಮಾಡಿದರೂ, ಅವರು ಎಷ್ಟೇ ಪ್ರಭಾವಶಾಲಿಯಾಗಿದ್ದರೂ, ತನಿಖೆ ಮತ್ತು ಶಿಕ್ಷೆಯಿಂದ ತಪ್ಪಿಸಿಕೊಳ್ಳಲಾಗದ ವ್ಯವಸ್ಥೆ ನಿರ್ಮಾಣವಾಗಬೇಕು.

ಈಗಲೂ ಕಣ್ಣೊರೆಸುವ ಮತ್ತೊಂದು ಪ್ರಯತ್ನ ನಡೆದರೆ, ಮುಂದೊಂದು ದಿನ ಮತ್ತೊಂದು ಹಗರಣ ಸಿಡಿಯುವುದು ಖಚಿತ. ಹಾಗಾಗಿ ನೇಮಕಾತಿ ಪ್ರಕ್ರಿಯೆಯ ಪ್ರತಿಯೊಂದು ಬಾಗಿಲಿಗೂ ಪಾರದರ್ಶಕತೆಯ ಬೀಗ ಜಡಿಯಬೇಕು. ಪ್ರತಿಯೊಂದು ನಿರ್ಧಾರಕ್ಕೂ ಹೊಣೆಗಾರಿಕೆಯ ಕೀಲಿ ಕೊಡಬೇಕು. ಪ್ರತಿ ಅಕ್ರಮಕ್ಕೂ ತ್ವರಿತ ಶಿಕ್ಷೆಯ ವ್ಯವಸ್ಥೆ ಬರಬೇಕು. ಇಲ್ಲದಿದ್ದರೆ ದಶಕಗಳ ಬಳಿಕವೂ ಮುಂದಿನ ಪುಟದಲ್ಲಿ ಮತ್ತೆ ಅದೇ ಕಥೆ ಬರೆಯಬೇಕಾಗುತ್ತದೆ. ಕೆಪಿಎಸ್‌ಸಿಯ ರೋಗಕ್ಕೆ ಈಗ ತೇಪೆ ಸಾಕಾಗದು, ಶಸ್ತ್ರಚಿಕಿತ್ಸೆಯೇ ಅನಿವಾರ್ಯ. ಸರ್ಕಾರ ತಳಮಟ್ಟದ ಪುನಾರಚನೆ ಅಥವಾ ಬೇರು ಮಟ್ಟದ ಸುಧಾರಣೆಗೆ ಕೈ ಹಚ್ಚುವುದ ಬಿಟ್ಟು, ನಾಳೆ ಬಾ ಎಂದು ಬರೆಯುವುದು ತರವಲ್ಲ. ಮುತ್ತಿ ಕಾಡುತ್ತಿರುವ ನಿರುದ್ಯೋಗ ಯುವಜನರನ್ನು ಸಿಡಿದೇಳಿಸುವ ದಿನಗಳು ಅಂಗಳದಲ್ಲಿ ನಿಂತಿವೆ.

ಕೆಪಿಎಸ್‌ಸಿಯ ಭ್ರಷ್ಟ ರೋಗಕ್ಕೆ ಅರೆಬರೆ ತೇಪೆ ಸಾಕು; ಶಾಶ್ವತ ಮದ್ದು ಬೇಕು!

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ)ದ ಸುತ್ತ ದಶಕಗಳಿಂದ ಕವಿದಿರುವ ಭ್ರಷ್ಟಾಚಾರದ ಕಾರ್ಮೋಡ ಕರಗುವ ಲಕ್ಷಣಗಳೇ ಕಾಣುತ್ತಿಲ್ಲ. ಅಧ್ಯಕ್ಷರ ಅಮಾನತು, ಮರುನೇಮಕ, ನ್ಯಾಯಾಲಯದ ಮಧ್ಯಪ್ರವೇಶ, ಇಡಿ ದಾಳಿಗಳೆಲ್ಲವೂ ರಾಜ್ಯದ ಉನ್ನತ ನೇಮಕಾತಿ ಸಂಸ್ಥೆಯೊಂದರ ದುಸ್ಥಿತಿಗೆ ಸಾಕ್ಷಿ. ಪ್ರತಿಬಾರಿ ಆರೋಪ ಬಂದಾಗಲೂ ತೇಪೆ ಹಚ್ಚುವ ಕೆಲಸವಾಗುತ್ತಿದೆಯೇ ಹೊರತು, ಬುಡಕ್ಕೆ ಅಂಟಿರುವ ರೋಗಕ್ಕೆ ಮದ್ದು ಅರೆಯುವ ಪ್ರಯತ್ನಗಳಾಗಿಲ್ಲ. ಆಯೋಗದ ಆಡಳಿತದಲ್ಲಿ ಆಮೂಲಾಗ್ರ ಸುಧಾರಣೆ ತಂದು, ಸಂಪೂರ್ಣ ವ್ಯವಸ್ಥೆಯನ್ನೇ ಶುದ್ಧೀಕರಿಸುವ ಕಾಲ ಈಗ ಬಂದಿದೆ.

ಕೆಪಿಎಸ್‌ಸಿಯಲ್ಲಿನ ಅಕ್ರಮಗಳು ಒಂದೊಂದಾಗಿ ಹೊರಬರುತ್ತಿರುವ ಬೆನ್ನಲ್ಲೇ, ಅಮಾನತುಗೊಂಡಿದ್ದ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರ ಸುತ್ತ ತನಿಖೆಯ ಕುಣಿಕೆ ಬಿಗಿಯಾಗುತ್ತಿದೆ. ನೇಮಕಾತಿ ಹಗರಣಗಳಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಮಂಗಳವಾರ ರಾಜ್ಯದ ವಿವಿಧೆಡೆ ಸುಮಾರು 21 ಸ್ಥಳಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದೆ. ಕೆಪಿಎಸ್‌ಸಿ ಕೇಂದ್ರ ಕಚೇರಿಯಿಂದ ಹಿಡಿದು ಶಿವಶಂಕರಪ್ಪ ಅವರ ನಿವಾಸ, ಆಯೋಗದ ಸದಸ್ಯೆ ಶಾಂತಾ ಹೊಸಮನಿ ಅವರ ಮನೆ, ಮಧ್ಯವರ್ತಿಗಳೆಂದು ಶಂಕಿಸಲಾಗಿರುವವರ ಸ್ಥಳಗಳು, ಆಯ್ಕೆಯಾದ ಅಭ್ಯರ್ಥಿಗಳ ಆವರಣ, ಪರೀಕ್ಷೆಯ ಡಿಜಿಟಲ್ ಮೌಲ್ಯಮಾಪನ ನಡೆಸಿದ ಸಂಸ್ಥೆಯ ಕಚೇರಿಯವರೆಗೆ ಇಡಿ ಶೋಧ ನಡೆಸಿದೆ. ನೇಮಕಾತಿ ಅಕ್ರಮದ ಆರೋಪ ಈಗ ಆಯೋಗದ ಗೋಡೆ ದಾಟಿ ಕೇಂದ್ರ ತನಿಖಾ ಸಂಸ್ಥೆಯ ಬಾಗಿಲು ತಟ್ಟಿದೆ.

ವಿಶೇಷವಾಗಿ 400 ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಹಗರಣದ ಆರೋಪಗಳು ಗಾಬರಿಗೊಳಿಸುತ್ತವೆ. ಪರೀಕ್ಷೆಗೂ ಮುನ್ನವೇ ಕನಿಷ್ಠ 29 ಅಭ್ಯರ್ಥಿಗಳಿಗೆ ಪ್ರಶ್ನೆಪತ್ರಿಕೆ ಅಕ್ರಮವಾಗಿ ಲಭ್ಯವಾಗಿತ್ತು, ಅಂತಿಮ ಆಯ್ಕೆ ಪಟ್ಟಿಯಲ್ಲಿ ಅಧ್ಯಕ್ಷರು, ಆಯೋಗದ ಸದಸ್ಯರು ಹಾಗೂ ಸಿಬ್ಬಂದಿಯ ಸಂಬಂಧಿಕರು ಅಗ್ರಸ್ಥಾನ ಪಡೆದಿದ್ದರು, ಪರೀಕ್ಷೆ ಬಳಿಕ ಮಧ್ಯವರ್ತಿಗಳು ಅಭ್ಯರ್ಥಿಗಳನ್ನು ಸಂಪರ್ಕಿಸಿ, ಒಎಂಆರ್ ಶೀಟ್‌ಗಳನ್ನು ತಿದ್ದಿ ಆಯ್ಕೆ ಮಾಡಿಸುವುದಾಗಿ ಹೇಳಿ ₹80 ಲಕ್ಷದವರೆಗೂ ಹಣ ಕೇಳಿದ್ದರು, ಅಧ್ಯಕ್ಷರ ಸಂಬಂಧಿ ಎನ್ನಲಾದವರೊಬ್ಬರು ಹಿಂದೆ ಪದವಿಯಲ್ಲಿ ಕೆಲವು ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದರೂ ಕೆಪಿಎಸ್‌ಸಿ ಪರೀಕ್ಷೆಯಲ್ಲಿ 450ಕ್ಕೂ ಹೆಚ್ಚು ಅಂಕ ಗಳಿಸಿದ್ದಾರೆ ಎಂಬಿತ್ಯಾದಿ ಆರೋಪಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಹುಳುಕಿದೆ ಎನ್ನುವುದನ್ನಂತೂ ಬಯಲು ಮಾಡಿವೆ.

ಶಿವಶಂಕರಪ್ಪ ಅವರ ಪುತ್ರಿ, ನಕಲಿ ಆದಾಯ ಪ್ರಮಾಣಪತ್ರ ಬಳಸಿ ಒಬಿಸಿ ಕೋಟಾದಡಿ ಹುದ್ದೆ ಪಡೆದಿದ್ದಾರೆ ಎಂಬ ಆರೋಪದ ಮೇಲೆ ರಾಜ್ಯಪಾಲರು ಕಳೆದ ಜುಲೈ 10ರಂದು ಅವರನ್ನು ಅಮಾನತುಗೊಳಿಸಿದ್ದರು. ಅವರ ನಿರೀಕ್ಷಣಾ ಜಾಮೀನು ಅರ್ಜಿ ಆಗಸ್ಟ್ 11ರಂದು ನ್ಯಾಯಾಲಯದಲ್ಲಿ ವಜಾಗೊಂಡಿತ್ತು. ಮತ್ತೊಂದೆಡೆ, ವಶಪಡಿಸಿಕೊಂಡಿರುವ 329 ಒಎಂಆರ್ ಶೀಟ್‌ಗಳ ವಿಧಿವಿಜ್ಞಾನ ಪರೀಕ್ಷೆ ನಡೆಯುತ್ತಿದೆ. ಈ ನಡುವೆ ಆಗಸ್ಟ್ 20ರಂದು ಕರ್ನಾಟಕ ಹೈಕೋರ್ಟ್‌ನಲ್ಲಿ ಅವರ ವಿರುದ್ಧ ಎರಡು ಪ್ರತ್ಯೇಕ ಹಗರಣಗಳ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಕೋರಿ ಸಲ್ಲಿಸಲಾಗಿರುವ ಅರ್ಜಿಗಳ ವಿಚಾರಣೆ ನಡೆಯಲಿದೆ. ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಹಾಗೂ ವೈದ್ಯ ಮಂಜುನಾಥ್ ಪ್ರತ್ಯೇಕವಾಗಿ ಸಿಬಿಐ ತನಿಖೆಗೆ ಮನವಿ ಮಾಡಿದ್ದಾರೆ. ಈಗಾಗಲೇ ರಾಜ್ಯದ ಸಿಐಡಿ ತನಿಖೆ ನಡೆಸುತ್ತಿರುವ ಪ್ರಕರಣಕ್ಕೆ ಇಡಿ ಪ್ರವೇಶಿಸಿದೆ.

1951ರಲ್ಲಿ ಸ್ಥಾಪನೆಯಾದ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಏಳು ದಶಕಗಳಿಗೂ ಹೆಚ್ಚು ಇತಿಹಾಸವಿದೆ. ರಾಜ್ಯದ ಸರ್ಕಾರಿ ಸೇವೆಗಳಿಗೆ ಅರ್ಹರನ್ನು ಆಯ್ಕೆ ಮಾಡುವ ಅತ್ಯಂತ ಮಹತ್ವದ ಸಾಂವಿಧಾನಿಕ ಸಂಸ್ಥೆಯೊಂದು, ಸುದೀರ್ಘ ಇತಿಹಾಸದ ಬಳಿಕವೂ ನೇಮಕಾತಿ ಅಕ್ರಮ, ಭ್ರಷ್ಟಾಚಾರ ಆರೋಪಗಳಿಂದ ಮುಕ್ತವಾಗದಿರುವುದು ವಿಷಾದಕರ ಮಾತ್ರವಲ್ಲ, ಆತಂಕಕಾರಿ. ಕೆಪಿಎಸ್‌ಸಿಯ ಸುತ್ತಲಿನ ವಿವಾದಗಳನ್ನು ಕೆದಕಿದರೆ, ಇದು ಯಾವುದೋ ಒಂದೆರಡು ಅಧಿಕಾರಿಗಳ ವ್ಯಕ್ತಿಗತ ತಪ್ಪುಗಳಿಂದ ಹಿಡಿದು ವ್ಯವಸ್ಥೆಯೊಳಗೆ ಕಾಲಕಾಲಕ್ಕೆ ಮರುಕಳಿಸುತ್ತಿರುವ ಸಾಂಕ್ರಾಮಿಕ ರೋಗ ಎಂಬ ಕಟು ಸತ್ಯವನ್ನು ಸ್ಪಷ್ಟಪಡಿಸುತ್ತದೆ.

1998, 1999 ಮತ್ತು 2004ರ ಗೆಜೆಟೆಡ್ ಪ್ರೊಬೇಷನರ್‌ಗಳ ನೇಮಕಾತಿಯಲ್ಲಿನ ಅಕ್ರಮಗಳ ಆರೋಪಗಳು ಕೆಪಿಎಸ್‌ಸಿ ಇತಿಹಾಸದ ಹಳೆಯ ಕಪ್ಪು ಅಧ್ಯಾಯಗಳಲ್ಲೊಂದು. ಆಗ ಆಯೋಗದ ಅಧ್ಯಕ್ಷರಾಗಿದ್ದ ಡಾ. ಎಚ್.ಎನ್. ಕೃಷ್ಣ ಅವರ



ಅವಧಿಯ ನೇಮಕಾತಿಯಲ್ಲಿ ಅರ್ಹತೆ ಇಲ್ಲದವರು ಆಯ್ಕೆಯಾಗಿದ್ದಾರೆ, ಪರೀಕ್ಷೆಯನ್ನೇ ಬರೆಯದವರಿಗೆ ಅವಕಾಶ ಕಲ್ಪಿಸಲಾಗಿದೆ, ನಕಲಿ ಅಂಕಪಟ್ಟಿಗಳನ್ನು ಬಳಸಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದವು. ಪ್ರಕರಣಗಳು ಕೊನೆಗೆ ನ್ಯಾಯಾಲಯದ ಮೆಟ್ಟಿಲೇರಿ, ತನಿಖೆಯ ಹಂತಕ್ಕೂ ತಲುಪಿದವು. 2011ರ ಅಕ್ಟೋಬರ್‌ನಲ್ಲಿ ಸಿಐಡಿ ಕೃಷ್ಣ ಅವರನ್ನು ಬಂಧಿಸಿತ್ತು. ಸಿಐಡಿ ವರದಿಯಲ್ಲೂ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿರುವುದನ್ನು ಉಲ್ಲೇಖಿಸಲಾಗಿತ್ತು. ಬಳಿಕ 2011ರಿಂದ 2013ರವರೆಗಿನ ಅವಧಿ ಮತ್ತೊಂದು ಕಪ್ಪು ಅಧ್ಯಾಯ. ಗೋನಾಳ್ ಭೀಮಪ್ಪ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಆರಂಭವಾದ 326 ಗೆಜೆಟೆಡ್ ಎ ಮತ್ತು ಬಿ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮದ ಆರೋಪಗಳು ಪರೀಕ್ಷೆಯಿಂದ ಮೌಲ್ಯಮಾಪನ, ಸಂದರ್ಶನದವರೆಗೂ ವ್ಯಾಪಿಸಿದವು. ಸಿಐಡಿ ತನಿಖೆಯ ಪ್ರಕಾರ, ಆಯ್ಕೆ ಮಾಡಿದ ಮೌಲ್ಯಮಾಪಕರ ಮೂಲಕ ಮುಖ್ಯ ಪರೀಕ್ಷೆಯ ಮೌಲ್ಯಮಾಪನದಲ್ಲಿ ಹಸ್ತಕ್ಷೇಪ ಮಾಡಲಾಗಿದೆ, ವಿಷಯ ಪರಿಣಿತರಲ್ಲದವರಿಂದ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿಸಲಾಗಿದೆ ಎಂಬ ಆರೋಪವೂ ಕೇಳಿಬಂತು. ಅಭ್ಯರ್ಥಿಗಳಿಂದ ಹಣದ ಬೇಡಿಕೆ ಇಡಲಾಗಿದೆ, ಹಣ ಕೊಡದವರಿಗೆ ಸಂದರ್ಶನದಲ್ಲಿ ಕಡಿಮೆ ಅಂಕ ನೀಡಲಾಗಿದೆ ಎಂಬ ಆರೋಪಗಳು ಪ್ರಕರಣವನ್ನು ಮತ್ತಷ್ಟು ಗಂಭೀರಗೊಳಿಸಿದವು. 2012ರಲ್ಲಿ ಪ್ರಾಥಮಿಕ ಮತ್ತು ಮುಖ್ಯ ಪರೀಕ್ಷೆಗಳು, 2013ರಲ್ಲಿ ಸಂದರ್ಶನಗಳು ನಡೆದ ಈ ನೇಮಕಾತಿ ಪ್ರಕ್ರಿಯೆಯೂ ಕೊನೆಗೆ ಸಿಐಡಿ ತನಿಖೆಯ ಸುಳಿಗೆ ಸಿಲುಕಿತು. ಅರ್ಹತೆಯ ಆಧಾರದಲ್ಲಿ ಸರ್ಕಾರಿ ಉದ್ಯೋಗ ಪಡೆಯಬೇಕಿದ್ದ ಅಭ್ಯರ್ಥಿಗಳು ವರ್ಷಗಳ ಪರಿಶ್ರಮದ ಬಳಿಕವೂ ಅನಿಶ್ಚಿತತೆಯಲ್ಲೇ ಉಳಿಯಬೇಕಾಯಿತು. ಒಂದು ನೇಮಕಾತಿ ಸಂಸ್ಥೆಯ ವೈಫಲ್ಯದ ಬೆಲೆಯನ್ನ ಅಭ್ಯರ್ಥಿಗಳು ಕಟ್ಟಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು ಇಲ್ಲೇ.

2015ರಲ್ಲಿ ಮತ್ತೆ ಪ್ರಶ್ನೆಪತ್ರಿಕೆ ಸಂಬಂಧಿತ ಅವ್ಯವಸ್ಥೆ ತಲೆದೋರಿತು. ಗೆಜೆಟೆಡ್ ಪ್ರೊಬೇಷನರ್ ಪರೀಕ್ಷೆಯಲ್ಲಿ ನಿಗದಿತ ದಿನದ ಬದಲು ಮುಂದಿನ ದಿನಗಳ ಪ್ರಶ್ನೆಪತ್ರಿಕೆಗಳು ಅಭ್ಯರ್ಥಿಗಳಿಗೆ ಹಂಚಿಕೆಯಾಗಿವೆ ಎಂಬ ಆರೋಪಗಳೆದ್ದವು. 2019-20ರ ವೇಳೆಗೆ ವಿವಾದದ ಸ್ವರೂಪ ಮತ್ತಷ್ಟು ಬದಲಾಯಿತು. ಉತ್ತರಪತ್ರಿಕೆಗಳ ಮೌಲ್ಯಮಾಪನ, ಅಂಕಗಳ ನೀಡಿಕೆ, ವಿಷಯ ಪರಿಣಿತರಲ್ಲದವರಿಂದ ಮೌಲ್ಯಮಾಪನ, ಡಿಜಿಟಲ್ ಮೌಲ್ಯಮಾಪನದಲ್ಲಿನ ಲೋಪಗಳು ಸೇರಿದಂತೆ ಹಲವು ಆರೋಪಗಳು ನ್ಯಾಯಾಲಯದವರೆಗೆ ತಲುಪಿದವು. ಪ್ರಶ್ನೆಪತ್ರಿಕೆ ಲೀಕ್ ಆಗುವುದ ಬಿಡಿ, ಉತ್ತರಪತ್ರಿಕೆಯ ಮೌಲ್ಯಮಾಪನವೇ ಅನುಮಾನಕ್ಕೊಳಗಾದರೆ, ವಿಶ್ವಾಸಾರ್ಹತೆ ಉಳಿಯುವುದು ಹೇಗೆ? 1998ರ ಜೆ.ಎಚ್. ಪಟೇಲ್ ನೇತೃತ್ವದ ಜನತಾ ದಳ ಸರ್ಕಾರದಿಂದ ಹಿಡಿದು ಇಂದಿನ ಕಾಂಗ್ರೆಸ್‌ವರೆಗೆ ಸರ್ಕಾರಗಳು ಬದಲಾಗಿವೆ, ಮುಖ್ಯಮಂತ್ರಿಗಳು ಬದಲಾಗಿದ್ದಾರೆ, ಕೆಪಿಎಸ್‌ಸಿ ಅಧ್ಯಕ್ಷರು ಮತ್ತು ಸದಸ್ಯರೂ ಬದಲಾಗಿದ್ದಾರೆ. ಆದರೆ ಅಕ್ರಮಗಳ ಸರಣಿ ಮಾತ್ರ ನಿಂತಿಲ್ಲ.

ಈಗ 2026ರಲ್ಲಿ ಮತ್ತೊಮ್ಮೆ ಕೆಪಿಎಸ್‌ಸಿ ಗಂಭೀರ ಆರೋಪಗಳ ಕೇಂದ್ರವಾಗಿದೆ. ಇಷ್ಟೆಲ್ಲ ಆರೋಪಗಳು, ತನಿಖೆಗಳು, ನ್ಯಾಯಾಂಗ ಮಧ್ಯಪ್ರವೇಶಗಳು ಮತ್ತು ನೇಮಕಾತಿ ಪ್ರಕ್ರಿಯೆ ರದ್ದಾದ ಉದಾಹರಣೆಗಳ ಬಳಿಕವೂ ಕೆಪಿಎಸ್‌ಸಿಯಲ್ಲಿ ಮೂಲಭೂತ ಬದಲಾವಣೆ ಏಕೆ ಸಾಧ್ಯವಾಗಿಲ್ಲ? ವರ್ಷಗಳು ಕಳೆದಿವೆ, ತಂತ್ರಜ್ಞಾನ ಬದಲಾಗಿದೆ, ಪರೀಕ್ಷಾ ವಿಧಾನಗಳೂ ಬದಲಾಗಿವೆ. ಆದರೆ ಆರೋಪಗಳ ಮೂಲ ಸ್ವರೂಪ ಮಾತ್ರ ಹಾಗೇ ಇದೆ. ಇದು ಅಧಿಕಾರಿಗಳನ್ನ ಬದಲಿಸುವುದರಿಂದ ಮಾತ್ರ ಸರಿಯಾಗುವ ಸಮಸ್ಯೆಯಂತೂ ಅಲ್ಲ, ಬುಡದಿಂದಲೇ ಕಿತ್ತೊಗೆಯಬೇಕಿರುವ ಕೊಳೆತ ಬೇರು.

ಈಗ ಮಾಡಬೇಕಿರುವುದು ಮತ್ತೊಂದು ತನಿಖಾ ಸಮಿತಿ ರಚಿಸುವುದು, ಮತ್ತೊಬ್ಬ ಅಧಿಕಾರಿಯನ್ನು ಅಮಾನತುಗೊಳಿಸುವುದು ಅಥವಾ ವಿವಾದ ತಣ್ಣಗಾಗುವವರೆಗೆ ಕಾದು ಕೈತೊಳೆದುಕೊಳ್ಳುವುದಲ್ಲ. ಪ್ರಶ್ನೆಪತ್ರಿಕೆ ಸಿದ್ಧಪಡಿಸುವುದರಿಂದ ಹಿಡಿದು ಮುದ್ರಣ, ಸಾಗಣೆ, ಸಂಗ್ರಹ, ಪರೀಕ್ಷಾ ಕೇಂದ್ರಕ್ಕೆ ತಲುಪಿಸುವಿಕೆ, ಉತ್ತರಪತ್ರಿಕೆಗಳ ಡಿಜಿಟಲೀಕರಣ, ಮೌಲ್ಯಮಾಪನ, ಅಂಕಗಳ ಸಂರಕ್ಷಣೆ ಮತ್ತು ಅಂತಿಮ ಫಲಿತಾಂಶ ಪ್ರಕಟಿಸುವವರೆಗಿನ ಪ್ರತಿಯೊಂದು ಹಂತದಲ್ಲೂ ಯಾರಿಗೆ ಯಾವ ಹಂತದಲ್ಲಿ ಪ್ರವೇಶವಿದೆ ಎಂಬುದು ಸಂಪೂರ್ಣ ಸಾರ್ವಜನಿಕವಾಗಬೇಕು. ಒಂದೇ ಹಂತದಲ್ಲಿ ಒಂದೇ ವ್ಯಕ್ತಿ ಅಥವಾ ಸಣ್ಣ ಗುಂಪಿಗೆ ಸಂಪೂರ್ಣ ನಿಯಂತ್ರಣ ಸಿಗದಂತೆ ಬಹುಹಂತದ ಭದ್ರತಾ ವ್ಯವಸ್ಥೆ ರೂಪಿಸಬೇಕು. ಅದನ್ನು ಪಾರದರ್ಶಕಗೊಳಿಸಬೇಕು.

ಅಷ್ಟೇ ಅಲ್ಲ, ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿಯಲ್ಲೂ ಪಾರದರ್ಶಕತೆಯನ್ನು ಕಡ್ಡಾಯಗೊಳಿಸಬೇಕಿದೆ. ಅಧ್ಯಕ್ಷರು, ಸದಸ್ಯರು ಹಾಗೂ ಪ್ರಮುಖ ಅಧಿಕಾರಿಗಳ ವಿರುದ್ಧದ ದೂರುಗಳನ್ನು ಪರಿಶೀಲಿಸುವ ಸ್ವತಂತ್ರ ವ್ಯವಸ್ಥೆ ಇರಬೇಕು. ಹಿತಾಸಕ್ತಿ ಸಂಘರ್ಷವಿರುವ ಸಂದರ್ಭಗಳಲ್ಲಿ ಸಂಬಂಧಿಕರು ಅಥವಾ ಪರಿಚಿತರ ಅಭ್ಯರ್ಥಿಗಳಿರುವ ನೇಮಕಾತಿ ಪ್ರಕ್ರಿಯೆಯಿಂದ ಸಂಬಂಧಪಟ್ಟವರು ಸಂಪೂರ್ಣವಾಗಿ ದೂರ ಉಳಿಯುವಂತೆ ಕಟ್ಟುನಿಟ್ಟಿನ ನಿಯಮ ರೂಪಿಸಬೇಕು. ಎಲ್ಲಕ್ಕಿಂತ ಮುಖ್ಯವಾಗಿ, ಕೆಪಿಎಸ್‌ಸಿಯ ಮೇಲಿನ ನಂಬಿಕೆಯನ್ನು ಮರಳಿ ಕಟ್ಟಬೇಕು. ಪ್ರತಿಯೊಂದು ನೇಮಕಾತಿ ಪರೀಕ್ಷೆಯಲ್ಲೂ ಅಭ್ಯರ್ಥಿಗೆ ತನ್ನ ಉತ್ತರಪತ್ರಿಕೆ ಹೇಗೆ ಮೌಲ್ಯಮಾಪನಗೊಂಡಿತು, ತನ್ನ ಅಂಕ ಹೇಗೆ ನಿಗದಿಯಾಯಿತು, ಆಯ್ಕೆಪಟ್ಟಿ ಯಾವ ಮಾನದಂಡದ ಮೇಲೆ ರೂಪುಗೊಂಡಿತು ಎಂಬುದನ್ನು ಪ್ರಶ್ನಿಸುವ ಮತ್ತು ಪರಿಶೀಲಿಸುವ ಅವಕಾಶ ಇರಬೇಕು. ಯಾರೇ ತಪ್ಪು ಮಾಡಿದರೂ, ಅವರು ಎಷ್ಟೇ ಪ್ರಭಾವಶಾಲಿಯಾಗಿದ್ದರೂ, ತನಿಖೆ ಮತ್ತು ಶಿಕ್ಷೆಯಿಂದ ತಪ್ಪಿಸಿಕೊಳ್ಳಲಾಗದ ವ್ಯವಸ್ಥೆ ನಿರ್ಮಾಣವಾಗಬೇಕು.

ಈಗಲೂ ಕಣ್ಣೊರೆಸುವ ಮತ್ತೊಂದು ಪ್ರಯತ್ನ ನಡೆದರೆ, ಮುಂದೊಂದು ದಿನ ಮತ್ತೊಂದು ಹಗರಣ ಸಿಡಿಯುವುದು ಖಚಿತ. ಹಾಗಾಗಿ ನೇಮಕಾತಿ ಪ್ರಕ್ರಿಯೆಯ ಪ್ರತಿಯೊಂದು ಬಾಗಿಲಿಗೂ ಪಾರದರ್ಶಕತೆಯ ಬೀಗ ಜಡಿಯಬೇಕು. ಪ್ರತಿಯೊಂದು ನಿರ್ಧಾರಕ್ಕೂ ಹೊಣೆಗಾರಿಕೆಯ ಕೀಲಿ ಕೊಡಬೇಕು. ಪ್ರತಿ ಅಕ್ರಮಕ್ಕೂ ತ್ವರಿತ ಶಿಕ್ಷೆಯ ವ್ಯವಸ್ಥೆ ಬರಬೇಕು. ಇಲ್ಲದಿದ್ದರೆ ದಶಕಗಳ ಬಳಿಕವೂ ಮುಂದಿನ ಪುಟದಲ್ಲಿ ಮತ್ತೆ ಅದೇ ಕಥೆ ಬರೆಯಬೇಕಾಗುತ್ತದೆ. ಕೆಪಿಎಸ್‌ಸಿಯ ರೋಗಕ್ಕೆ ಈಗ ತೇಪೆ ಸಾಕಾಗದು, ಶಸ್ತ್ರಚಿಕಿತ್ಸೆಯೇ ಅನಿವಾರ್ಯ. ಸರ್ಕಾರ ತಳಮಟ್ಟದ ಪುನಾರಚನೆ ಅಥವಾ ಬೇರು ಮಟ್ಟದ ಸುಧಾರಣೆಗೆ ಕೈ ಹಚ್ಚುವುದ ಬಿಟ್ಟು, ನಾಳೆ ಬಾ ಎಂದು ಬರೆಯುವುದು ತರವಲ್ಲ. ಮುತ್ತಿ ಕಾಡುತ್ತಿರುವ ನಿರುದ್ಯೋಗ ಯುವಜನರನ್ನು ಸಿಡಿದೇಳಿಸುವ ದಿನಗಳು ಅಂಗಳದಲ್ಲಿ ನಿಂತಿವೆ.

ಅಲೆಮಾರಿಗಳ ಮೂಲಸೌಕರ್ಯ ಪರಿಶೀಲನೆಗೆ ತಹಶೀಲ್ದಾರ್ ಸೂಚನೆ: ಅಧಿಕಾರಿಗಳ ಭೇಟಿ

ಜನವಸತಿ ಪ್ರದೇಶದಲ್ಲಿ ಕುಡಿಯುವ ನೀರು, ರಸ್ತೆ, ಬೀದಿ ದೀಪ, ಶೌಚಾಲಯ ಹಾಗೂ ವಸತಿ ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆಯ ಕುರಿತು ಸ್ಥಳ ಪರಿಶೀಲನೆ ನಡೆಸಿ ಸಮಗ್ರ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.


ಬೆಳಗಾವಿ ಜಿಲ್ಲೆಯ ಯರಗಟ್ಟಿ ಪಟ್ಟಣದ 44ನೇ ವಾರ್ಡ್‌ನಲ್ಲಿ ಸುಮಾರು 30 ವರ್ಷಗಳಿಂದ ವಾಸವಾಗಿರುವ ಅಲೆಮಾರಿ ಸಮುದಾಯದವರು ಮೂಲಸೌಕರ್ಯಗಳಿಂದ ವಂಚಿರಾಗಿದ್ದ ಕುರಿತು ಈ ದಿನ.ಕಾಮ್ ಪ್ರಕಟಿಸಿದ್ದ ವರದಿಗೆ ಯರಗಟ್ಟಿ ತಹಶೀಲ್ದಾರ್ ಮಾಧವಾನಂದ ಗುಂಡಪ್ಪಗೋಳ ಸ್ಪಂದಿಸಿದ್ದರು. ಈ ಹಿನ್ನೆಲೆಯಲ್ಲಿ ಯರಗಟ್ಟಿ ಪಟ್ಟಣ ಪಂಚಾಯಿತಿ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದ್ದಾರೆ.

ಆಧಾರ್ ಕಾರ್ಡ್ ಮತ್ತು ರೇಷನ್ ಕಾರ್ಡ್ ಇಲ್ಲದಿರುವವರನ್ನು ಗಮನಿಸಿದ ಅಧಿಕಾರಿಗಳು ಪಟ್ಟಣ ಪಂಚಾಯಿತಿಯಿಂದ ಸೌಲಭ್ಯ ಪಡೆಯುವಂತೆ ತಿಳಿಸಿದ್ದಾರೆ.

ಆಗಸ್ಟ್ 16ರಂದು 80 ವರ್ಷಗಳ ಸ್ವಾತಂತ್ರ್ಯದ ಬಳಿಕವೂ ಅಲೆಮಾರಿಗಳ ಬದುಕಿಗೆ ಮೂಲಸೌಕರ್ಯ ಮರೀಚಿಕೆ ಎಂಬ ಶೀರ್ಷಿಕೆಯಡಿ ವರದಿಯನ್ನು ಪ್ರಕಟಿಸಲಾಗಿತ್ತು. ಈ ವರದಿಯನ್ನು ಗಂಭೀರವಾಗಿ ಪರಿಗಣಿಸಿರುವ ತಹಶೀಲ್ದಾರ್, ಅಲೆಮಾರಿ ಸಮುದಾಯದವರು ವಾಸಿಸುವ ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸುವಂತೆ ಯರಗಟ್ಟಿ ಪಟ್ಟಣ ಪಂಚಾಯಿತಿಗೆ ಲಿಖಿತ ಸೂಚನೆ ನೀಡಿದ್ದಾರೆ.

ಜನವಸತಿ ಪ್ರದೇಶದಲ್ಲಿ ಕುಡಿಯುವ ನೀರು, ರಸ್ತೆ, ಬೀದಿ ದೀಪ, ಶೌಚಾಲಯ ಹಾಗೂ ವಸತಿ ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆಯ ಕುರಿತು ಸ್ಥಳ ಪರಿಶೀಲನೆ ನಡೆಸಿ ಸಮಗ್ರ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಅಲ್ಲದೆ, ಪ್ರದೇಶದಲ್ಲಿ ವಾಸಿಸುತ್ತಿರುವ ಅಲೆಮಾರಿ ಸಮುದಾಯದ ಜನರ ನಿಖರ ಸಂಖ್ಯೆ, ವಾಸಸ್ಥಳದ ವಿವರ, ಲಭ್ಯವಿರುವ ಹಾಗೂ ಕೊರತೆಯಿರುವ ಮೂಲಭೂತ



ಸೌಲಭ್ಯಗಳ ಮಾಹಿತಿ, ಪಟ್ಟಣ ಪಂಚಾಯತಿ ವತಿಯಿಂದ ಅಲೆಮಾರಿ ಸಮುದಾಯದ ಅಭಿವೃದ್ಧಿಗಾಗಿ ಕಾಯ್ದಿರಿಸಿರುವ ಶೇ.7.25 ಅಥವಾ ಇತರೆ ವಿಶೇಷ ನಿಧಿಗಳ ಬಳಕೆಯ ವಿವರವನ್ನು ಸಲ್ಲಿಸುವಂತೆ ನಿರ್ದೇಶಿಸಲಾಗಿದೆ.

ಅಲೆಮಾರಿಗಳ ನೋವಿಗೆ ಅಧಿಕಾರಿಗಳ ಸ್ಪಂದನೆ

ಸಮುದಾಯಕ್ಕೆ ತುರ್ತಾಗಿ ಒದಗಿಸಬಹುದಾದ ಕುಡಿಯುವ ನೀರು ಮತ್ತು ನೈರ್ಮಲ್ಯ ಸೌಲಭ್ಯಗಳ ಕುರಿತು ಕೈಗೊಳ್ಳುವ ತಾತ್ಕಾಲಿಕ ಕ್ರಮಗಳು ಹಾಗೂ ಶಾಶ್ವತ ವಸತಿ ಮತ್ತು ಹಕ್ಕುಪತ್ರ ವಿತರಣೆಗೆ ಸಂಬಂಧಿಸಿದ ಭವಿಷ್ಯದ ಕ್ರಿಯಾ ಯೋಜನೆಯನ್ನೂ ವರದಿಯಲ್ಲಿ ತಿಳಿಸುವಂತೆ ಸೂಚಿಸಲಾಗಿದೆ.

ಯರಗಟ್ಟಿ ಪಟ್ಟಣದ ಅಲೆಮಾರಿ ಕುಟುಂಬಗಳು ಹಲವು ವರ್ಷಗಳಿಂದ ಮೂಲಭೂತ ಸೌಲಭ್ಯಗಳಿಂದ ವಂಚಿತಹೊಂಡು ಜೀವನ ಸಾಗಿಸುತ್ತಿವೆ. ಪ್ಲಾಸ್ಟಿಕ್ ಹೆಕ್ಕುವುದೇ ಪ್ರಮುಖ ಉದ್ಯೋಗವಾಗಿದ್ದು, ದಿನವಿಡೀ ದುಡಿದರೂ ಸುಮಾರು ₹200 ಆದಾಯ ದೊರೆಯುತ್ತದೆ. ಶೌಚಾಲಯ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಮಹಿಳೆಯರು ಮತ್ತು ಮಕ್ಕಳು ಸಂಕಷ್ಟ ಅನುಭವಿಸುತ್ತಿದ್ದಾರೆ.

ಮುರಿದ ತಗಡಿನ ಶೆಡ್‌ಗಳಲ್ಲಿ ವಾಸಿಸುತ್ತಿರುವ ಕುಟುಂಬಗಳು ಮಳೆ ಬಂದಾಗ ನೀರು ಸೋರಿಕೆಯಿಂದ ತೊಂದರೆ ಅನುಭವಿಸುತ್ತಿವೆ. ಮಕ್ಕಳಿಗೆ ಶಿಕ್ಷಣದ ಅವಕಾಶವೂ ಸಮರ್ಪಕವಾಗಿ ದೊರೆಯುತ್ತಿಲ್ಲ. ರೇಷನ್ ಕಾರ್ಡ್ ಇಲ್ಲದ ಕಾರಣ ಪಡಿತರದಿಂದಲೂ ವಂಚಿತರಾಗಿದ್ದು, ಆಧಾರ್ ಕಾರ್ಡ್ ಮಾಡಿಸಿಕೊಳ್ಳಲೂ ಆಗದೆ ಸಮಸ್ಯೆ ಎದುರಿಸುತ್ತಿದ್ದಾರೆ.

ಈ ಸಮಸ್ಯೆಗಳ ಕುರಿತು ಪ್ರಕಟವಾದ ಸುದ್ದಿಗೆ ತಹಶೀಲ್ದಾರ್ ಅವರು ತಕ್ಷಣ ಸ್ಪಂದಿಸಿ ಸ್ಥಳ ಪರಿಶೀಲನೆಗೆ ಸೂಚಿಸಿರುವುದು ಅಲೆಮಾರಿ ಸಮುದಾಯದಲ್ಲಿ ಆಶಾಭಾವನೆ ಮೂಡಿಸಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR